ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

**ಒಟ್ಟು ಪ್ರಶ್ನೆಗಳು – ೯೪**

# ಪಟ್ಟಿ – ೦೨

# ಕರ್ನಾಟಕ ವಿಧಾನಪರಿಷತ್ತು

ನೂರ ಇಪ್ಪತ್ತೊಂಬತ್ತನೇ ಅಧಿವೇಶನ

**ಮಂಗಳವಾರ, ದಿನಾಂಕ : ೩೦ನೇ ಜೂನ್, ೨೦೧೫**

---

## ಸಮೂಹ – II

೧. ಇಂಧನ ಸಚಿವರು

೨. ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು

೩. ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು

೪. ಲೋಕೋಪಯೋಗಿ ಸಚಿವರು

೫. ಸಹಕಾರ ಮತ್ತು ಸಕ್ಕರೆ ಸಚಿವರು

೬. ಕೃಷಿ ರಾಜ್ಯ ಸಚಿವರು

---

## ವಿದ್ಯುತ್ ಉತ್ಪಾದನೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೭ (೨೯) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ವಾರ್ಷಿಕ ಅಗತ್ಯವಿರುವ ವಿದ್ಯುತ್ತಿನ ಪ್ರಮಾಣವೆಷ್ಟು ; (ಯೂನಿಟ್‌ಗಳಲ್ಲಿ ಮಾಹಿತಿ ನೀಡುವುದು)

(ಆ) ಪ್ರಸ್ತುತ ಯಾವ ಯಾವ ಮೂಲಗಳಿಂದ ವಿದ್ಯುತ್ ಉತ್ಪಾದನೆಯಾಗುತ್ತಿದೆ ; (ಪ್ರತಿ ವಿದ್ಯುತ್ ಉತ್ಪಾದನೆ ಘಟಕ ಹಾಗೂ ಉತ್ಪಾದನೆಯ ವಿವರ ನೀಡುವುದು)

(ಇ) ಅಗತ್ಯವಾದ ವಿದ್ಯುತ್ ಉತ್ಪಾದನೆಗೆ ವ್ಯತ್ಯಾಸವಿರುವುದನ್ನು ಸರಿಪಡಿಸಲು ಸರ್ಕಾರ ಯಾವ ಮಾರ್ಗ ಅನುಸರಿಸಿದೆ ? (ವಿವರ ನೀಡುವುದು)

## ತೋಟಗಾರಿಕೆ ಇಲಾಖೆಯ ಅನುದಾನದ ದುರ್ಬಳಕೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೮ (೩೦) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ತೋಟಗಾರಿಕೆ ಇಲಾಖೆಗೆ ೨೦೧೩–೧೪ ಮತ್ತು ೨೦೧೪–೧೫ನೇ ಸಾಲಿನಲ್ಲಿ ವಿವಿಧ ಯೋಜನೆಗಳ ಅನುಷ್ಠಾನಕ್ಕಾಗಿ ನಿಗದಿಪಡಿಸಲಾದ ಕೇಂದ್ರ ಮತ್ತು ರಾಜ್ಯ ಸರ್ಕಾರದ ಅನುದಾನವೆಷ್ಟು ;



(ಆ) ಅದರಲ್ಲಿ ಆಯಾ ವರ್ಷ ಭರಿಸಲಾದ ವೆಚ್ಚ ಮತ್ತು ನಿರ್ಬಳಕೆಯಾದ ಹಣವೆಷ್ಟು ; (ವಿವರ ನೀಡುವುದು)

(ಇ) ನಿಗದಿತ ಅನುದಾನವು ಸಕಾಲದಲ್ಲಿ ವೆಚ್ಚವಾಗದೆ ಉಳಿಯಲು ಕಾರಣಗಳೇನು ; ಬೇಜವಾಬ್ದಾರಿಯುತ ಅಧಿಕಾರಿಗಳ ವಿರುದ್ಧ ಸರ್ಕಾರವು ಯಾವ ಯಾವ ಕ್ರಮಗಳನ್ನು ಕೈಗೊಂಡಿದೆ ? (ಮಾಹಿತಿ ನೀಡುವುದು)

## ಕಾಲುವೆಗಳ ಮೇಲೆ ಸೌರ ವಿದ್ಯುತ್ ಉತ್ಪಾದನೆ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) :–**

೧೦೯ (೩೧) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉತ್ತರ ಕರ್ನಾಟಕ ನೀರಾವರಿ ಯೋಜನಾ ಪ್ರದೇಶದ ಕಾಲುವೆಗಳ ಮೇಲೆ ಎಷ್ಟು ಪ್ರಮಾಣದ ಸೌರ ವಿದ್ಯುತ್ ಉತ್ಪಾದನೆಗೆ ಚಾಲನೆ ನೀಡಲಾಗಿದೆ ; (ವಿವರಗಳನ್ನು ಒದಗಿಸುವುದು)

(ಆ) ಯಾವ ಯಾವ ಕಂಪನಿಗಳು ಇಲ್ಲಿ ವಿದ್ಯುತ್ ಉತ್ಪಾದನಾ ಯೋಜನೆಯನ್ನು ಪ್ರಾರಂಭಿಸಲಿವೆ ? (ಉತ್ಪಾದನೆಯ ಪ್ರಮಾಣ, ಖರೀದಿ ಮೌಲ್ಯ, ನೀಡಿರುವ ರಿಯಾಯಿತಿ, ಸರ್ಕಾರಕ್ಕೆ ದೊರೆಯುವ ಲಾಭ ಎಷ್ಟು ; ವಿವರಗಳನ್ನು ನೀಡುವುದು)

## ತೋಟಗಾರಿಕಾ ಬೆಳೆಗಳಿಗೆ ರಾಸಾಯನಿಕ ವಸ್ತುಗಳ ಬಳಕೆ ನಿಷೇಧಿಸುವ ಬಗ್ಗೆ

**ಶ್ರೀ ಸಿ.ಹೆಚ್. ವಿಜಯಶಂಕರ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೦ (೩೨) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಇತ್ತೀಚಿನ ದಿನಗಳಲ್ಲಿ ತೋಟಗಾರಿಕಾ ಬೆಳೆಗಳಾದ ಬಾಳೆ, ಕಲ್ಲಂಗಡಿ, ಮಾವು ಹಾಗೂ ಇತರೆ ಹಣ್ಣುಗಳನ್ನು ನೈಸರ್ಗಿಕವಾಗಿ ಹಣ್ಣಾಗುವುದಕ್ಕೆ ಬಿಡದೆ, ಕೃತಕ ಹಾಗೂ ಶೀಘ್ರವಾಗಿ ಹಣ್ಣಾಗುವಂತೆ ಮಾಡಲು ರಾಸಾಯನಿಕ ವಸ್ತುಗಳನ್ನು ಬಳಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಅದರಿಂದ ಜನಸಾಮಾನ್ಯರ ಆರೋಗ್ಯದ ಮೇಲೆ ಉಂಟಾಗಬಹುದಾದ ವ್ಯತಿರಿಕ್ತ ಪರಿಣಾಮಗಳೇನು ; ಈ ಪ್ರಕ್ರಿಯೆಗೆ ಬಳಸುತ್ತಿರುವ ರಾಸಾಯನಿಕ ವಸ್ತುಗಳು ಯಾವುವು ; (ವಿವರಗಳನ್ನು ಒದಗಿಸುವುದು)

(ಇ) ಇದನ್ನು ತಪ್ಪಿಸಲು ಹಾಗೂ ರಾಸಾಯನಿಕ ವಸ್ತುಗಳ ಬಳಕೆಯನ್ನು ಕಡ್ಡಾಯವಾಗಿ ನಿಷೇಧಿಸಲು ಸರ್ಕಾರದ ಮುಂದಿರುವ ಸದ್ಯದ ಯೋಜನೆಗಳು ಯಾವುವು ; ಜನ ಸಾಮಾನ್ಯರ ಆರೋಗ್ಯದೊಂದಿಗೆ ಚೆಲ್ಲಾಟವಾಡುತ್ತಿರುವ ವ್ಯಕ್ತಿ ಮತ್ತು ಸಂಸ್ಥೆಗಳ ವಿರುದ್ಧ ಕೈಗೊಳ್ಳಲಿರುವ ಕಾನೂನಾತ್ಮಕ ಕ್ರಮಗಳೇನು ; ಬಳಕೆದಾರರಲ್ಲಿ ಮತ್ತು ಸಾರ್ವಜನಿಕರಲ್ಲಿ ಸದರಿ ವಿಚಾರಕ್ಕೆ ಸಂಬಂಧಿಸಿದಂತೆ ಜಾಗೃತಿ ಮೂಡಿಸಲು ಇಲಾಖೆ ಈವರೆಗೂ ತೆಗೆದುಕೊಂಡಿರುವ ಕ್ರಮಗಳೇನು ? (ಪೂರ್ಣ ಮಾಹಿತಿಯನ್ನು ಒದಗಿಸುವುದು)



## ರಾಜ್ಯದಲ್ಲಿ ಕೃಷಿ ಇಲಾಖೆಯಿಂದ ರೈತರಿಗೆ ನೀಡುತ್ತಿರುವ ಸಹಾಯಧನಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೧ (೩೬) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಬೇರೆ ಬೇರೆ ಜಿಲ್ಲೆಗಳಲ್ಲಿ ಕೃಷಿ ಇಲಾಖೆಯಿಂದ ರೈತರಿಗೆ ಸಹಾಯಧನ ನೀಡಲಾಗುತ್ತಿರುವ ವಿವಿಧ ಸೌಲಭ್ಯ ಹಾಗೂ ಸವಲತ್ತುಗಳು ಯಾವುವು ; ಅದನ್ನು ಪಡೆಯಲು ರೈತರಿಗೆ ಇರಬೇಕಾದ ಅರ್ಹತೆಗಳೇನು ;

(ಆ) ಕಳೆದ ಎರಡು ವರ್ಷಗಳಲ್ಲಿ ಬೇರೆ ಬೇರೆ ಜಿಲ್ಲೆಗಳಲ್ಲಿ ರೈತರಿಗೆ ನೀಡಲಾದ ಸಹಾಯಧನದ ಒಟ್ಟು ಮೊತ್ತವೆಷ್ಟು ? (ಜಿಲ್ಲಾವಾರು, ವರ್ಷವಾರು ವಿವರ ನೀಡುವುದು)

## ರಾಜ್ಯದಲ್ಲಿ ಮಾರಾಟವಾಗುತ್ತಿರುವ ಗುಣಮಟ್ಟ ಪ್ರಮಾಣಪತ್ರ ಹೊಂದಿರದ ಕೊಳೆರೋಗ ಔಷಧಿಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೨ (೩೫) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಗುಣಮಟ್ಟದ ಪ್ರಮಾಣಪತ್ರ ಹೊಂದಿರದ ಬೇರೆ ಬೇರೆ ಕಂಪನಿಯವರು ಕೊಳೆರೋಗ ನಿಯಂತ್ರಣ ಔಷಧಿಗಳನ್ನು ಮಾರುಕಟ್ಟೆಯಲ್ಲಿ ಮಾರಾಟ ಮಾಡುತ್ತಿರುವುದನ್ನು ಸರ್ಕಾರದ

ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದನ್ನು ನಿಯಂತ್ರಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ರಾಜ್ಯದಲ್ಲಿ ಗುಣಮಟ್ಟದ ಪ್ರಮಾಣಪತ್ರ ಹೊಂದಿರದೆ ಮಾರುಕಟ್ಟೆಯಲ್ಲಿ ಮಾರಾಟವಾಗುತ್ತಿರುವ ಬೇರೆ ಬೇರೆ ಕಂಪನಿಯವರ ಕೊಳೆರೋಗ ನಿಯಂತ್ರಣಾ ಔಷಧಿಗಳನ್ನು ಗುಣಮಟ್ಟ ಪರೀಕ್ಷೆಗೆ ಒಳಪಡಿಸಲಾಗಿದೆಯೇ ; ಇಲ್ಲವಾದಲ್ಲಿ ಕಾರಣವೇನು ? (ಗುಣಮಟ್ಟ ಪರೀಕ್ಷಿಸಿದಲ್ಲಿ ಫಲಿತಾಂಶ ವರದಿಯ ಪ್ರತಿ ಒದಗಿಸುವುದು)

## ರಾಜ್ಯದ ವಿವಿಧ ಹೆದ್ದಾರಿಗಳಲ್ಲಿನ ಸುಂಕ ವಸೂಲಿ ಕೇಂದ್ರಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೩ (೩೪) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ವಿವಿಧ ಹೆದ್ದಾರಿಗಳಲ್ಲಿರುವ ಸುಂಕ ವಸೂಲಿ ಕೇಂದ್ರ (Toll Gate) ಗಳ ಸಂಖ್ಯೆ ಎಷ್ಟು ; ಅವು ಯಾವುವು ; ಅವುಗಳನ್ನು ಯಾವ ಯಾವ ಸಂಸ್ಥೆಯ ವ್ಯಕ್ತಿಗೆ ಸುಂಕ ವಸೂಲಿಗೆ ವಹಿಸಲಾಗಿದೆ; ಎಷ್ಟು ವರ್ಷಗಳ ಅವಧಿಗೆ ಗುತ್ತಿಗೆ ನೀಡಲಾಗಿದೆ ; (ಹೆದ್ದಾರಿವಾರು, ಕೇಂದ್ರವಾರು, ಸಂಸ್ಥೆವಾರು ವಿವರ ನೀಡುವುದು)

(ಆ) ಭಯೋತ್ಪಾದಕರು ಮತ್ತು ರೌಡಿಗಳು ಸುಂಕ ವಸೂಲಿ ಕೇಂದ್ರಗಳಲ್ಲಿ ಗುತ್ತಿಗೆಯಾಧಾರದಲ್ಲಿ ಕಾರ್ಯನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇಲ್ಲವಾದಲ್ಲಿ ತನಿಖೆ ನಡೆಸಲಾಗುವುದೇ ;



(ಇ) ರಾಜ್ಯದ ವಿವಿಧ ಹೆದ್ದಾರಿಗಳಲ್ಲಿರುವ ಸುಂಕ ವಸೂಲಿ ಕೇಂದ್ರ (Toll Gate) ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ವಿಳಾಸ ಮತ್ತು ಭಾವಚಿತ್ರವು ಸರ್ಕಾರದ ವಶದಲ್ಲಿದೆಯೇ; ಇಲ್ಲವಾದಲ್ಲಿ ಕಾರಣವೇನು ?

## ರಾಜ್ಯದಲ್ಲಿ ಅಂತರ್ ಜಲವೃದ್ಧಿಗೆ ಕೃಷಿ ಇಲಾಖೆ ಹಾಕಿಕೊಂಡಿರುವ ಕಾರ್ಯಕ್ರಮಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೪ (೩೭) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅಂತರ್ ಜಲವೃದ್ಧಿಗೆ ಕೃಷಿ ಇಲಾಖೆ ಹಾಕಿ ಕೊಂಡಿರುವ ವಿವಿಧ ಕಾರ್ಯಕ್ರಮಗಳು ಯಾವುವು ; ಈ ಕಾರ್ಯಕ್ರಮಗಳ ಫಲಿತಾಂಶದ ಮೌಲ್ಯಮಾಪನ ಮಾಡಲಾಗಿದೆಯೇ ; ಮಾಡಲಾಗಿದ್ದಲ್ಲಿ, ಫಲಿತಾಂಶವೇನು ; (ವಿವರ ನೀಡುವುದು)

(ಆ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯ ರೈತರು ಕೃಷಿಗೆ ನೀರಾವರಿಗಾಗಿ ಬಳಸುತ್ತಿರುವ ಕೊಳವೆ ಬಾವಿಗಳು ಬತ್ತುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಲ್ಲಿ, ಇವುಗಳಿಗೆ ಮರುಪೂರ್ಣ ಮಾಡಲು ಅಥವಾ ಬತ್ತುವಿಕೆ ತಡೆಗಟ್ಟಲು ತಜ್ಞರ ಅಭಿಪ್ರಾಯ ಸಂಗ್ರಹಿಸಲಾಗಿದೆಯೇ ;

(ಇ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಹೊಳೆಯಿಂದ ಕೃಷಿ ಚಟುವಟಿಕೆಗಳಿಗೆ ನೀರನ್ನು ಬಳಸುತ್ತಿರುವ ಪಂಪುಸೆಟ್‌ಗಳ ಸಂಖ್ಯೆ

ಎಷ್ಟು ; ತೆರೆದ ಬಾವಿಗಳ ಸಂಖ್ಯೆ ಎಷ್ಟು; ಕೊಳವೆ ಬಾವಿಗಳ ಸಂಖ್ಯೆ ಎಷ್ಟು ? (ತಾಲ್ಲೂಕುವಾರು ವಿವರ ನೀಡುವುದು)

## ಪೌರ ಕಾರ್ಮಿಕರ ಭತ್ಯೆ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೫ (೧೭೨) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಹಾನಗರ ಪಾಲಿಕೆ, ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿಗಳಲ್ಲಿ ಕೆಲಸ ಮಾಡುತ್ತಿರುವ ಒಟ್ಟು ಪೌರ ಕಾರ್ಮಿಕರ ಸಂಖ್ಯೆ ಎಷ್ಟು ;

(ಆ) ಯಾವ ಯಾವ ಸಂಸ್ಥೆಗಳಲ್ಲಿ ಎಷ್ಟೆಷ್ಟು ಮಂದಿ ಪೌರ ಕಾರ್ಮಿಕರು ಕೆಲಸ ಮಾಡುತ್ತಿದ್ದಾರೆ ;

(ಇ) ಇವರು ಎಷ್ಟು ವರ್ಷಗಳಿಂದ ಪೌರ ಕಾರ್ಮಿಕರಾಗಿ ಕೆಲಸ ಮಾಡುತ್ತಿದ್ದಾರೆ ;

(ಈ) ಈ ಸಂಸ್ಥೆಗಳು ಪೌರ ಕಾರ್ಮಿಕರನ್ನು ನೇಮಿಸುವ ಗುತ್ತಿಗೆದಾರರಿಗೆ ಮಾಹೆಯಾನ ನೀಡುತ್ತಿರುವ ಒಟ್ಟು ಭತ್ಯೆ ಮೊತ್ತ ಎಷ್ಟು ; ಸದರಿ ಗುತ್ತಿಗೆದಾರರು ಪ್ರತಿ ಪೌರ ಕಾರ್ಮಿಕರಿಗೆ ನೀಡುತ್ತಿರುವ ಭತ್ಯೆ ಎಷ್ಟು ?



## ರಾಜ್ಯದಲ್ಲಿನ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯ್ತಿ ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೬ (೧೭೩) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ನಗರ ಪಾಲಿಕೆ, ನಗರ ಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯ್ತಿಗಳ ಸಂಖ್ಯೆ ಎಷ್ಟು; ಯಾವುವು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸರ್ಕಾರದಿಂದ ಈ ಸಂಸ್ಥೆಗಳಿಗೆ ಕಳೆದ ಮೂರು ವರ್ಷಗಳಿಂದ ಎಷ್ಟು ಅನುದಾನ ಒದಗಿಸಲಾಗಿದೆ ;

(ಇ) ಈ ಸಂಸ್ಥೆಗಳಿಗೆ ಆದಾಯದ ಮೂಲ ಏನು; ಮತ್ತು ೨೦೧೪–೧೫ನೇ ಸಾಲಿನಲ್ಲಿ ಗಳಿಸಿದ ಆದಾಯ ಎಷ್ಟು ?

## ರಾಜ್ಯದಲ್ಲಿರುವ ಮಲ ಗುಂಡಿಗಳ ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೭ (೧೭೪) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿನ ಮಲಗುಂಡಿಗಳ ಸಂಖ್ಯೆ ಎಷ್ಟು ; ಯಾವ ಯಾವ ನಗರಗಳಲ್ಲಿ ಎಷ್ಟೆಷ್ಟು ಮಲ ಗುಂಡಿಗಳಿವೆ ;

(ಆ) ಈ ಗುಂಡಿಗಳಿಂದ ಮಲ ತೆಗೆಯಲು ಯಂತ್ರಗಳನ್ನು ಬಳಸಲಾಗುತ್ತಿದೆಯೇ ; ಇದುವರೆಗೆ ಯಾವ ಯಾವ ನಗರ ಪಾಲಿಕೆ, ನಗರ ಸಭೆ ಮತ್ತು ಪುರಸಭೆಗಳಿಗೆ ಮಲ ತೆಗೆಯುವ ಯಂತ್ರಗಳನ್ನು ಒದಗಿಸಲಾಗಿದೆ ? (ವಿವರ ಒದಗಿಸುವುದು)

## ಮಂಡ್ಯ ಕೆರೆ ಆವರಣದಲ್ಲಿ ಮನೆ ನಿರ್ಮಾಣ ಲೈಸೆನ್ಸ್ ನೀಡುವುದು

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೮ (೧೭೭) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ನಗರದ ಮೂಡಾ ವ್ಯಾಪ್ತಿಯಲ್ಲಿ ಬರುವ ಕೆರೆ ಆವರಣದಲ್ಲಿರುವ ನಿವೇಶನಗಳಲ್ಲಿ ಮನೆ ಕಟ್ಟಲು ಪರವಾನಗಿಯನ್ನು ನೀಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಮನೆ ಕಟ್ಟಲು ಪರವಾನಗಿ ಮತ್ತು ಲಾಟರಿಯಲ್ಲಿ ನಿವೇಶನಗಳು ಲಭ್ಯವಾಗಿದ್ದು ನೋಂದಾವಣೆಯಾಗಿರುವವರಿಗೂ ಖಾತೆ ಬದಲಾವಣೆ ಮಾಡಿ ಕೊಡಲು ಸರ್ಕಾರಕ್ಕೆ ಇರುವ ತೊಂದರೆಗಳೇನು ? (ಪೂರ್ಣ ಮಾಹಿತಿ ನೀಡುವುದು)



## ಹಾವೇರಿ ಜಿಲ್ಲೆಯಲ್ಲಿ ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿಗಳ ಕಾಮಗಾರಿಗಳ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೯ (೨೪೪) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೨–೧೩, ೨೦೧೩–೧೪, ೨೦೧೪–೧೫ರಲ್ಲಿ ಹಾವೇರಿ ಜಿಲ್ಲೆಯಲ್ಲಿ ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿಗಳಿಗೆ ಸರ್ಕಾರದ ವಿವಿಧ ಯೋಜನೆಗಳಿಂದ ಮಂಜೂರಾದ ಹಣವೆಷ್ಟು ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಆ) ಸದರಿ ಯೋಜನೆಯ ಕಾಮಗಾರಿಗಳು ಸಮಯಕ್ಕೆ ಸರಿಯಾಗಿ ಮುಗಿದಿವೆಯೇ ;

(ಇ) ಮುಕ್ತಾಯವಾಗದಿದ್ದರೆ, ಸದರಿ ಯೋಜನೆಯ ಕಾಮಗಾರಿಗಳು ಯಾವ ಹಂತದಲ್ಲಿವೆ ? (ಸಂಪೂರ್ಣ ಮಾಹಿತಿ ಒದಗಿಸುವುದು)

## ಹಾವೇರಿ ಜಿಲ್ಲೆಯಲ್ಲಿ ವಿದ್ಯುತ್ ಸೌಲಭ್ಯ ವಂಚಿತ ಕುಟುಂಬಗಳ ಬಗ್ಗೆ ಕುರಿತು

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೦ (೨೪೫) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾವೇರಿ ಜಿಲ್ಲೆಯಲ್ಲಿ ವಿದ್ಯುತ್ ಸೌಲಭ್ಯ ವಂಚಿತ ಕುಟುಂಬಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಗ್ರಾಮವಾರು ವಿವರ ನೀಡುವುದು)

(ಆ) ಹಾವೇರಿ ಜಿಲ್ಲೆಯಲ್ಲಿ ವಿದ್ಯುತ್ ಸೌಲಭ್ಯ ವಂಚಿತ ಕುಟುಂಬಗಳಿಗೆ ವಿದ್ಯುತ್ ಸೌಲಭ್ಯ ಕಲ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಹಾವೇರಿ ಜಿಲ್ಲೆಯಲ್ಲಿ ಆರ್.ಐ.ಡಿ.ಎಫ್. ಯೋಜನೆಯ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೧ (೨೪೩) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾವೇರಿ ಜಿಲ್ಲೆಯಲ್ಲಿ ಕಳೆದ ಐದು ವರ್ಷಗಳ ಅವಧಿಯಲ್ಲಿ ಆರ್.ಐ.ಡಿ.ಎಫ್. ಯೋಜನೆ ಅಡಿಯಲ್ಲಿ ಎಷ್ಟು ಮೊತ್ತದ ಮತ್ತು



ಯಾವ ಯಾವ ಅಭಿವೃದ್ಧಿ ಕಾಮಗಾರಿಗಳನ್ನು ಸರ್ಕಾರವು ಕೈಗೊಂಡಿದೆ ;

(ಆ) ಸದರಿ ಜಿಲ್ಲೆಯಲ್ಲಿ ಎಷ್ಟು ಸ್ಥಳಗಳನ್ನು ಗ್ರಾಮೀಣ್ ಗೋದಾಮುಗಳನ್ನು ನಿರ್ಮಿಸಲಾಗಿದೆ ;

(ಇ) ಕೃಷಿ ಉತ್ಪನ್ನಗಳ ಮಾರುಕಟ್ಟೆಗಳನ್ನು ಆಧುನೀಕರಣಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ರಾಜ್ಯದಲ್ಲಿರುವ ಸಕ್ಕರೆ ಕಾರ್ಖಾನೆಗಳ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೨ (೧೭೮) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸಕ್ಕರೆ ಕಾರ್ಖಾನೆಗಳ ಸಂಖ್ಯೆ ಎಷ್ಟು ; ಆ ಪೈಕಿ ಸರ್ಕಾರಿ ಸ್ವಾಮ್ಯದ ಹಾಗೂ ಖಾಸಗಿ ಒಡೆತನದಲ್ಲಿರುವ ಕಾರ್ಖಾನೆಗಳು ಎಷ್ಟು ; (ಜಿಲ್ಲಾವಾರು ಹಾಗೂ ತಾಲ್ಲೂಕುವಾರು ಕಾರ್ಖಾನೆಯ ಹೆಸರು, ಮಾಲೀಕರ ಹೆಸರು ಮತ್ತು ವಿಳಾಸ ಸಮೇತ ಮಾಹಿತಿ ಒದಗಿಸುವುದು)

(ಆ) ಪ್ರತಿಯೊಂದು ಕಾರ್ಖಾನೆ ಒಂದು ವರ್ಷಕ್ಕೆ ಎಷ್ಟು ಟನ್ ಕಬ್ಬು ನುರಿಸುತ್ತವೆ ; ಪ್ರತಿಯೊಂದು ಕಾರ್ಖಾನೆಗಳಿಂದ ರೈತರಿಗೆ ಕೊಡಬೇಕಾದ ಬಾಕಿ ಹಣ ಎಷ್ಟು ;

(ಇ) ಪ್ರತಿ ಟನ್ನಿಗೆ ನೀಡಲಾಗುತ್ತಿರುವ ದರ ಎಷ್ಟು ? (ಕಾರ್ಖಾನೆವಾರು ಮಾಹಿತಿ ನೀಡುವುದು)

## ರಾಜ್ಯದ ಹೆದ್ದಾರಿಗಳನ್ನು ರಾಷ್ಟ್ರೀಯ ಹೆದ್ದಾರಿಗಳಾಗಿ ಮೇಲ್ದರ್ಜೆಗೇರಿಸುವ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೩ (೨೪೬) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಹೆದ್ದಾರಿಗಳನ್ನು ರಾಷ್ಟ್ರೀಯ ಹೆದ್ದಾರಿಗಳಾಗಿ ಮೇಲ್ದರ್ಜೆಗೇರಿಸುವಂತೆ ಕೇಂದ್ರ ಭೂ ಸಾರಿಗೆ ಮತ್ತು ಹೆದ್ದಾರಿ ಸಚಿವರಿಗೆ ಪ್ರಸ್ತಾವನೆಯನ್ನು ಕಳುಹಿಸಿರುವುದು ನಿಜವೇ ; (ವಿವರ ಒದಗಿಸುವುದು)

(ಆ) ಯಾವ ಯಾವ ಹೆದ್ದಾರಿಗಳನ್ನು ಮತ್ತು ಎಷ್ಟು ಕಿ.ಮೀ. ಉದ್ದದ ರಸ್ತೆಗಳನ್ನು ಮೇಲ್ದರ್ಜೆಗೇರಿಸಲು ಪ್ರಸ್ತಾಪಿಸಲಾಗಿದೆ ;

(ಇ) ಪ್ರಸ್ತಾವನೆಯನ್ನು ಕೇಂದ್ರ ಸರ್ಕಾರಕ್ಕೆ ಯಾವಾಗ ಕಳುಹಿಸಲಾಗಿದೆ ;

(ಈ) ಕೇಂದ್ರ ಸರ್ಕಾರದ ಮೇಲೆ ಒತ್ತಡ ತಂದು ಆದಷ್ಟು ಬೇಗನೆ ಕೇಂದ್ರದಿಂದ ಪ್ರಸ್ತಾವನೆಗೆ ಒಪ್ಪಿಗೆ ಪಡೆದು ಸರ್ಕಾರ ಪ್ರಯತ್ನಿಸುವುದೇ ?



## ತೆಂಗು ಬೆಳೆಗೆ ನುಸಿ ರೋಗಬಾಧೆ ಹಾಗೂ ಪರಿಹಾರ

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೪ (೧೮೯) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನುಸಿ ಬಾಧೆಯಿಂದ ಬಳಲಿದ ತೆಂಗು ಬೆಳೆಗಾರರ ಸಂಕಷ್ಟ ನಿವಾರಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ; ಇದರ ಪರಿಹಾರಕ್ಕೆ ಸರ್ಕಾರ ಮುಂದಾಗಿದೆಯೇ ; ಇಲ್ಲದಿದ್ದಲ್ಲಿ ಕಾರಣಗಳೇನು ;

(ಆ) ರಾಜ್ಯದಲ್ಲಿ ನುಸಿ ಬಾಧೆಯಿಂದ ನಾಶವಾಗಿರುವ ತೆಂಗು ಬೆಳೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು) ;

(ಇ) ತೆಂಗು ಬೆಳೆಗೆ ಹಾಗೂ ಇದರ ಕ್ಷೇತ್ರ ವಿಸ್ತರಣೆಗೆ ನರೇಗಾ ನೆರವು ನೀಡಲು ಉದ್ದೇಶಿಸಲಾಗಿದೆಯೇ ;

(ಈ) ಇದರಿಂದ ತೆಂಗು ಬೆಳೆಯ ರೈತರಿಗೆ ಸಿಗುವ ಪ್ರಯೋಜನ, ಉಪಯೋಗಗಳೇನು ; (ವಿವರ ನೀಡಿ)

(ಉ) ಸದರಿ ಯೋಜನೆ ಅನುಷ್ಠಾನಕ್ಕಾಗಿ ಸರ್ಕಾರ ಈಗಾಗಲೇ ಅಗತ್ಯ ಕ್ರಿಯಾ ಯೋಜನೆಯನ್ನು ತಯಾರಿಸಿದೆಯೇ ;

(ಊ) ತಯಾರಿಸಿದ್ದಲ್ಲಿ, ತನ್ನ ಪಾಲಿನ ಹಣವನ್ನಾದರೂ ರೈತರ ಸಂಕಷ್ಟ ಪರಿಹಾರಕ್ಕೆ ನೀಡಲು ಇರುವ ತೊಂದರೆಗಳೇನು ? (ವಿವರ ನೀಡುವುದು)

## ಕೃಷಿ ಮಾರುಕಟ್ಟೆಗಳಿಗೆ ಮೂಲಭೂತ ಸೌಕರ್ಯ ಬಿಸಿಯೂಟದ ವ್ಯವಸ್ಥೆಯ ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೫ (೧೮೦) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೃಷಿ ಮಾರುಕಟ್ಟೆ ಸಮಿತಿಗಳಲ್ಲಿ ರೈತರಿಗೆ ಮಧ್ಯಾಹ್ನದ ಬಿಸಿಯೂಟ ಯೋಜನೆಯನ್ನು ಹಮ್ಮಿಕೊಳ್ಳಲು ಸರ್ಕಾರ ನಿರ್ಧರಿಸಿದೆಯೇ ;

(ಆ) ಇದಕ್ಕೆ ಖರ್ಚಾಗುವ ಮೊತ್ತವೆಷ್ಟು ; ಯಾವಾಗಿನಿಂದ ಜಾರಿಗೆ ತರಲು ಉದ್ದೇಶಿಸಲಾಗಿದೆ ; ಇದಲ್ಲದೇ ಕೃಷಿ ಮಾರುಕಟ್ಟೆಗಳಿಗೆ ಸಮರ್ಪಕ ಮೂಲಭೂತ ಸೌಲಭ್ಯ ಕಲ್ಪಿಸಲು (ಶುದ್ಧ ಕುಡಿಯುವ ನೀರು ಶೌಚಾಲಯ) ಯೋಜನೆ ರೂಪಿಸಲಾಗಿದೆಯೇ ; (ವಿವರ ನೀಡುವುದು)

(ಇ) ಈ ನಿಟ್ಟಿನಲ್ಲಿ ಆನ್ ಲೈನ್ ಟ್ರೇಡಿಂಗ್ ಅಳವಡಿಸಿಕೊಂಡಿರುವ ಮಾರುಕಟ್ಟೆಗಳ ಉತ್ಪನ್ನಗಳ ಗುಣಮಟ್ಟ ನಿರ್ಧರಿಸಲು ಉದ್ದೇಶಿಸಿದೆಯೇ ಕಳಪೆ ಗುಣಮಟ್ಟದ ಪದಾರ್ಥಗಳನ್ನು ಹತ್ತಿಕ್ಕಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಈ) ಇದರಿಂದಾಗಿ ಮಾರುಕಟ್ಟೆಗಳಲ್ಲಿ ರೈತರಿಗೆ ಪೂರ್ಣ ಪ್ರಮಾಣದ ಸೌಲಭ್ಯ ಯೋಜನೆಗಳನ್ನು ಕಲ್ಪಿಸಿದಂತಾಗುವುದೇ ? (ವಿವರ ನೀಡುವುದು)



## ರಾಜ್ಯದಲ್ಲಿನ ಅಲ್ಪಸಂಖ್ಯಾತರಲ್ಲಿನ ಧರ್ಮ/ಸಮುದಾಯದ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೧೨೬ (೨೧೧) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಯಾವ ಯಾವ ಧರ್ಮಗಳು/ಸಮುದಾಯಗಳು ಅಲ್ಪಸಂಖ್ಯಾತರ ಪಟ್ಟಿಯಲ್ಲಿ ಸೇರಿವೆ ;

(ಆ) ಅಲ್ಪಸಂಖ್ಯಾತರ ಆಯೋಗವು ಸ್ಥಾಪನೆಯಾಗಿದ್ದು, ಯಾವಾಗ ಸದರಿ ಆಯೋಗದ ಅಧ್ಯಕ್ಷರು ಯಾರು ; (ಈವರೆವಿಗಿನ ಅಧ್ಯಕ್ಷರ ಹೆಸರಿನ ವಿವರ ನೀಡುವುದು)

(ಇ) ಅಲ್ಪಸಂಖ್ಯಾತರ ಇಲಾಖೆಗೆ ಪ್ರಸಕ್ತ ವರ್ಷ ಒದಗಿಸಿರುವ ಹಣವೆಷ್ಟು ;

(ಈ) ಹಜ್ ಯಾತ್ರೆಗೆ ಒದಗಿಸಿರುವ ಹಣ ಎಷ್ಟು ;

(ಉ) ಬಾಕಿ ಅಲ್ಪಸಂಖ್ಯಾತರಿಗೂ ಧಾರ್ಮಿಕ ಯಾತ್ರೆಗೆ ಅನುದಾನ ನೀಡಲಾಗುತ್ತಿದೆಯೇ ;

(ಊ) ಅಲ್ಪ ಸಂಖ್ಯಾತರ ಇಲಾಖೆಯಲ್ಲಿ ಹಲವು ಅಲ್ಪಸಂಖ್ಯಾತರ ಸಮುದಾಯಗಳಿಗೆ ಸಿಗಬೇಕಾದ ನ್ಯಾಯಯುತ ಸೌಲಭ್ಯಗಳ ಪಾಲು ಸಿಗುತ್ತಿಲ್ಲವೆಂಬ ಕೂಗು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಋ) ಅಲ್ಪಸಂಖ್ಯಾತರ ಸಮುದಾಯಗಳಲ್ಲೇ ಅನುದಾನದ ಸಮಪಾಲು ಹಂಚಿಕೆಗೆ ಸರ್ಕಾರದ ಕ್ರಮ ಏನು ?

## "ಲಘು ನೀರಾವರಿ ನೀತಿ" ರೂಪನೆಯ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೧೨೭ (೨೬೩) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ "ಲಘು ನೀರಾವರಿ ನೀತಿ" ರೂಪಿಸಲಾಗಿದೆಯೇ, ರೂಪಿಸದಿದ್ದರೆ, ರೂಪಿಸುವ ಕಾರ್ಯ ಯಾವ ಹಂತದಲ್ಲಿದೆ ; ಅದರ ವಿವರಗಳೇನು ;

(ಆ) ರಾಜ್ಯದಲ್ಲಿ " ಮಣ್ಣು ಆರೋಗ್ಯ ಕಾರ್ಡ್" ನೀಡಲು ನಿರ್ಣಯಿಸಲಾಗಿದೆಯೇ ; ಆ ಕಾರ್ಯ ಯಾವ ಹಂತದಲ್ಲಿದೆ ; ಎಷ್ಟು ರೈತರಿಗೆ ನೀಡಲಾಗಿದೆ ;

(ಇ) ರಾಜ್ಯದಲ್ಲಿರುವ ಮಣ್ಣು ಪರೀಕ್ಷಾ ಪ್ರಯೋಗಾಲಗಳ ಸಂಖ್ಯೆ ಎಷ್ಟು; ಅವು ಯಾವುವು ? (ಸಂಪೂರ್ಣ ವಿವರ ನೀಡುವುದು)

## ಕಬ್ಬಿನ ರೋಡ್ ಸೆಸ್ ಮೂಲಕ ಕೈಗೊಂಡ ಕಾಮಗಾರಿಗಳು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೧೨೮ (೨೦೯) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೦೨ ವರ್ಷಗಳಲ್ಲಿ ವಿಜಯಪುರ, ಬಾಗಲಕೋಟೆ, ಬೆಳಗಾವಿ ಜಿಲ್ಲೆಗಳಲ್ಲಿ ಕಬ್ಬಿನ ರೋಡ್ ಸೆಸ್ ಮೂಲಕ ಕೈಗೊಂಡಿರುವ ಕಾಮಗಾರಿಗಳು ಯಾವುವು ; (ಕಾಮಗಾರಿಯ ವಿವರ ನೀಡುವುದು)



(ಆ) ಪ್ರತಿಯೊಂದು ಕಾಮಗಾರಿಗಳಿಗೆ ಒದಗಿಸಿದ ಹಣ ಎಷ್ಟು ;

(ಇ) ಪ್ರಸ್ತುತ ಬಿಡುಗಡೆ ಮಾಡಲಾದ ಹಣ ಎಷ್ಟು ; ಅದರ ವಿನಯೋಗಕ್ಕೆ ತೆಗೆದುಕೊಂಡ ಕ್ರಮವೇನು ?

## ಧಾರವಾಡ ವಿಶ್ವವಿದ್ಯಾಲಯ, ಧಾರವಾಡದ ಸ್ನಾತಕೋತ್ತರ ಕೇಂದ್ರ ವಿಸ್ತರಣಾ ಕೇಂದ್ರಗಳ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೧೨೯ (೨೧೦) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೃಷಿ ವಿಶ್ವ ವಿದ್ಯಾಲಯ ಧಾರವಾಡ, ಇದರ ಸ್ನಾತಕೋತ್ತರ ಕೇಂದ್ರ, ವಿಸ್ತರಣಾ ಕೇಂದ್ರ, ಸಂಶೋಧನಾ ಕೇಂದ್ರ ಯಾವುವು ಹಾಗೂ ಎಲ್ಲಿವೆ ; (ವಿವರ ನೀಡುವುದು)

(ಆ) ಈ ವಿಶ್ವ ವಿದ್ಯಾಲಯವು ವಿಜಯಪುರ, ಬಾಗಲಕೋಟೆ, ಬೆಳಗಾವಿ ಜಿಲ್ಲೆಗಳಲ್ಲಿ ನಡೆಸುತ್ತಿರುವ ಸಂಸ್ಥೆ, ಚಟುವಟಿಕೆಗಳು ಯಾವುವು ; (ಪ್ರತಿಯೊಂದರ ವಿವರ ನೀಡುವುದು)

(ಇ) ವಿಜಯಪುರ, ಸ್ನಾತಕೋತ್ತರ ಕೇಂದ್ರದಲ್ಲಿ ಇರುವ ಕೋರ್ಸ್‌ಗಳು ಯಾವುವು ; ಖಾಲಿ ಇರುವ ಬೋಧಕ / ಬೋಧಕೇತರ ಹುದ್ದೆಗಳು ಎಷ್ಟು ; ಸದರಿ ಕೇಂದ್ರಗಳಿಗೆ ಒದಗಿಸಿರುವ ಮೂಲಭೂತ ಸೌಲಭ್ಯಗಳೇನು ? (ವಿವರ ನೀಡುವುದು)

## ಪವನ ಶಕ್ತಿಯಿಂದ ವಿದ್ಯುತ್ ಉತ್ಪಾದನೆ

**ಶ್ರೀ ಎಸ್. ವ್ಹಿ ಸಂಕನೂರ (ಪದವೀಧರರ ಕ್ಷೇತ್ರ) :–**

೧೩೦ (೨೧೨) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಎಷ್ಟು ಸ್ಥಳಗಳಲ್ಲಿ ಪವನ ಶಕ್ತಿಯಿಂದ ವಿದ್ಯುತ್ ಉತ್ಪಾದನೆ ಮಾಡುವ ಘಟಕಗಳನ್ನು ಪ್ರಾರಂಭಿಸಲು ಅನುಮತಿ ನೀಡಲಾಗಿದೆ ; (ವಿವರ ನೀಡುವುದು)

(ಆ) ಈ ಘಟಕಗಳನ್ನು ಸ್ಥಾಪನೆ ಮಾಡಲು ಯಾವ–ಯಾವ ಸಂಸ್ಥೆ / ಕಂಪನಿಗಳಿಗೆ ಅನುಮತಿ ನೀಡಲಾಗಿದೆ ; (ವಿವರ ನೀಡುವುದು)

(ಇ) ಪ್ರತಿ ಘಟಕಗಳಲ್ಲಿ ಎಷ್ಟು "ಮಿಡ್ ಮಿಲ್" ಕಂಬಗಳು ಇರುವವು ; ಮತ್ತು ಪ್ರತಿ ಘಟಕದಿಂದ ಎಷ್ಟು ಮೆಗಾವ್ಯಾಟ್ ವಿದ್ಯುತ್ ಶಕ್ತಿ ಉತ್ಪಾದನೆ ಆಗುತ್ತಿರುವುದು ;

(ಈ) ಈ ಘಟಕ ಸ್ಥಾಪನೆ ಮಾಡುವಾಗ ಸಂಸ್ಥೆ/ಕಂಪನಿಗಳವರು ಭೂ ಮಾಲೀಕರಿಗೆ ಯಾವ ರೀತಿ, ಯಾವ ದರದಲ್ಲಿ ಒಪ್ಪಂದ ಮಾಡಿಕೊಂಡಿರುವರು ; (ವಿವರ ನೀಡುವುದು)

(ಉ) "ಮಿಡ್ ಮಿಲ್" ಅಳವಡಿಸುವಾಗ ಭೂ ಮಾಲೀಕರಿಂದ/ರೈತರಿಂದ ವಿರೋಧ ವ್ಯಕ್ತವಾಗಿದೆಯೇ ; ಹಾಗಿದ್ದಲ್ಲಿ ಕಾರಣಗಳೇನು ;

(ಊ) ಈ ಘಟಕಗಳಿಂದ ಉತ್ಪಾದನೆಯಾದ ವಿದ್ಯುತ್‌ನ್ನು ಯಾರು ಯಾವ ದರದಲ್ಲಿ ಖರೀದಿಸುತ್ತಾರೆ ಮತ್ತು ಅದನ್ನು ಯಾವ ದರದಲ್ಲಿ ಸಾರ್ವಜನಿಕರಿಗೆ ಮತ್ತು ಕೈಗಾರಿಕಾ ಸಂಸ್ಥೆಗಳಿಗೆ ವಿತರಿಸಲಾಗುತ್ತದೆ ? (ಘಟಕವಾರು ವಿವರ ನೀಡುವುದು)



## ಲೋಕೋಪಯೋಗಿ ಇಲಾಖೆಯ ವಸತಿ ಗೃಹಗಳು ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೧ (೨೧೫) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಲೋಕೋಪಯೋಗಿ ಇಲಾಖಾ ವ್ಯಾಪ್ತಿಯ ವಸತಿ ಗೃಹಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು, ಮಾಹಿತಿ ನೀಡುವುದು)

(ಆ) ಸದರಿ ವಸತಿ ಗೃಹಗಳನ್ನು ವಿತರಣೆ ಮಾಡಲು ಅನುಸರಿಸುವ ಮಾನದಂಡಗಳೇನು ;

(ಇ) ರಾಜ್ಯದ ವಿವಿದೆಡೆ ವಸತಿ ಗೃಹಗಳು ಸರಿಯಾದ ನಿರ್ವಹಣೆ ಇಲ್ಲದೆ ದುಸ್ಥಿತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ವಸತಿ ಗೃಹಗಳ ಸುಸ್ಥಿತಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಕೃಷಿ ಮಾರುಕಟ್ಟೆಗಳ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೨ (೨೧೬) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಕೃಷಿ ಮಾರುಕಟ್ಟೆಗಳ ಸಂಖ್ಯೆ ಎಷ್ಟು ;

(ಆ) ಕೃಷಿ ಮಾರುಕಟ್ಟೆಗಳ ಸಮಿತಿಗಳ ಹಾಗೂ ಸಿಬ್ಬಂದಿಗಳ ಕಾರ್ಯ ವೈಖರಿಯನ್ನು ಉನ್ನತೀಕರಿಸಲು ಸರ್ಕಾರ ರೂಪಿಸಿರುವ ಯೋಜನೆಗಳಾವುವು ;

(ಇ) ಯಾವ ಯಾವ ಸರಕುಗಳು ಕೃಷಿ ಮಾರುಕಟ್ಟೆ ವ್ಯಾಪ್ತಿಗೆ ಒಳಪಡುತ್ತವೆ ;

(ಈ) ರೈತರಿಗೆ ಯಾವ ಯಾವ ಸರಕುಗಳಿಗೆ ಎಷ್ಟು ಶೇಕಡಾವಾರು ಶುಲ್ಕ ನಿಗಧಿಪಡಿಸಲಾಗಿದೆ; (ಸರಕುವಾರು ಮಾಹಿತಿ ನೀಡುವುದು)

(ಉ) ಪ್ರಸ್ತುತ ಕೃಷಿ ಮಾರುಕಟ್ಟೆ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ? (ಹುದ್ದೆವಾರು ಮಾಹಿತಿ ನೀಡುವುದು)

## ಸಹಕಾರ ಇಲಾಖೆಯಿಂದ ಮಹಿಳೆಯರಿಗೆ ಅನುಷ್ಠಾನಗೊಳಿಸಿರುವ ಯೋಜನೆಗಳ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೩ (೨೧೭) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಿಂದ ರಾಜ್ಯದಲ್ಲಿ ಸಹಕಾರ ಇಲಾಖೆಯ ಮೂಲಕ ಅನುಷ್ಠಾನಗೊಂಡಿರುವ ಮಹಿಳಾ ಪರ ಯೋಜನೆಗಳಾವುವು ;

(ಆ) ಪ್ರಸಕ್ತ ಸಾಲಿನಲ್ಲಿ ನಿಗಧಿ ಪಡಿಸಿರುವ ಅನುದಾನ ಮತ್ತು ವಿನಿಯೋಗಿಸಲಾಗಿರುವ ಅನುದಾನದ ಮೊತ್ತವೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಮಹಿಳಾ ಸಹಕಾರ ಸಂಘಗಳ ಪುನಃಶ್ಚೇತನ ಮತು ಬಲವರ್ಧನೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?



## ಕರ್ನಾಟಕ ವಿದ್ಯುತ್ ಪ್ರಸರಣ ನಿಗಮಕ್ಕೆ ಬರಬೇಕಾದ ಬಾಕಿ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೪ (೨೧೪) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಎರಡು ವರ್ಷಗಳಿಂದ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದಿಂದ ಕೈಗಾರಿಕೆ ಮತ್ತು ವಾಣಿಜ್ಯ ಬಳಕೆಗೆ ವಿದ್ಯುತ್ ಸಂಪರ್ಕ ಪಡೆದ ಬಾಕಿ ಉಳಿಸಿಕೊಂಡಿರುವ ಕಂಪನಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಯಾವ ಯಾವ ಕಂಪನಿಗಳಿಂದ ಎಷ್ಟು ಹಣ ಬಾಕಿ ಬರಬೇಕಿದೆ ; ಎಷ್ಟು ವರ್ಷಗಳಿಂದ ಈ ಕಂಪನಿಗಳು ಬಾಕಿ ಉಳಿಸಿಕೊಂಡಿವೆ ;

(ಇ) ಸದರಿ ಕಂಪನಿಗಳಿಂದ ಬಾಕಿ ವಸೂಲಿ ಮಾಡಲು ಸರ್ಕಾರ ಕೈಗೊಂಡಿರುವ ಶಿಸ್ತಿನ ಕ್ರಮಗಳೇನು ?

## ಗಡಿ ಭಾಗದಲ್ಲಿರುವ ಕೃಷಿ ಉತ್ಪನ್ನ ಮಾರುಕಟ್ಟೆಗಳ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೧೩೫ (೨೧೮) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆಯ ಗಡಿ ಭಾಗದಲ್ಲಿರುವ ನಿಪ್ಪಾಣಿ ಸಂಕೇಶ್ವರ ರಾಯಭಾಗ ಬೆಳಗಾವಿ ಅಥಣಿ ಮತ್ತು ಖಾನಾಪೂರ ತಾಲ್ಲೂಕುಗಳ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳು ಗಡಿಭಾಗದಲ್ಲಿದ್ದು ಪಕ್ಕದ

ಮಹಾರಾಷ್ಟ್ರ ರಾಜ್ಯದ ಕೃಷಿ ಉತ್ಪನ್ನ ಮಾರುಕಟ್ಟೆಗಳ ಜೊತೆಯಲ್ಲಿ ಬೆಲೆ ಒದಗಿಸುವಲ್ಲಿ ತೊಂದರೆಯಾಗುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ ನಮ್ಮ ಸರ್ಕಾರ ಮತ್ತು ಮಹಾರಾಷ್ಟ್ರ ಸರ್ಕಾರ ರೈತರಿಗೆ ನೀಡುವ ಸೌಲಭ್ಯಗಳೇನು ಮಹಾರಾಷ್ಟ್ರಕ್ಕೆ ಹೋಲಿಸಿದಾದ ನಮ್ಮ ರಾಜ್ಯ ಸರ್ಕಾರ ನೀಡುವ ಸೌಲಭ್ಯ ಏನು ಕೊರತೆಗಳು ಕಂಡುಬರುತ್ತವೆ ;

(ಇ) ಈ ಕೊರತೆಗಳನ್ನು ನೀಗದಿ ಗಡಿಭಾಗದಲ್ಲಿರುವ ಕೃಷಿ ಉತ್ಪನ್ನ ಮಾರುಕಟ್ಟೆಗಳನ್ನು ಬಲಪಡಿಸುವ ವಿಚಾರ ಸರ್ಕಾರದ ಮುಂದೆ ಇದೆಯೇ ? (ಸಂಪೂರ್ಣ ವಿವರ ನೀಡುವುದು)

## ಕಬ್ಬಿನ ಉತ್ಪನ್ನಗಳಿಂದ ತೆರಿಗೆ ಸಂದಾಯವಾಗುತ್ತಿರುವ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೧೩೬ (೨೨೧) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಒಂದು ಟನ್ ಕಬ್ಬಿನಿಂದ ರಾಜ್ಯ ಸರಕಾರಕ್ಕೆ ತೆರಿಗೆ ರೂಪದಲ್ಲಿ ಕಬ್ಬು, ಸಕ್ಕರೆ, ಪ್ರೇಸಮೀಡ, ಮೋಲ್ಯಾಸೀಸ್, ಬಗಾಸಿಸ್ ಹಾಗೂ ಕಬ್ಬಿನ ಇತರ ಉತ್ಪನ್ನಗಳಿಂದ ತೆರಿಗೆ ರೂಪದಲ್ಲಿ ಸರಕಾರಕ್ಕೆ ಸಂದಾಯವಾಗುವ ಹಣವೆಷ್ಟು ;

(ಆ) ಹಾಗಿದ್ದಲ್ಲಿ, ಸಕ್ಕರೆ ಉದ್ಯಮದಿಂದ ಸರಕಾರಕ್ಕೆ ತೆರಿಗೆ ರೂಪದಲ್ಲಿ ಹಣ ಸಂದಾಯವಾಗುತ್ತಿದ್ದರೂ ಕೂಡಾ ಸರಕಾರವು ರೈತರಿಗೆ



ಬೆಂಬಲ ಬೆಲೆ ಘೋಷಣೆ ಮಾಡುವಲ್ಲಿ ಹಿಂದೇಟು ಹಾಕಲು ಕಾರಣಗಳೇನು ;

(ಇ) ಉತ್ತರ ಪ್ರದೇಶ – ಬಿಹಾರ ರಾಜ್ಯಗಳಲ್ಲಿ ಕಬ್ಬು ಬೆಳೆಗಾರರಿಗೆ ಸರಕಾರವು ಕಬ್ಬಿಗೆ ೪೦೦–೨೫೦ ಸಹಾಯಧನ ನೀಡುತ್ತಿದ್ದು ನಮ್ಮ ರಾಜ್ಯಲ್ಲಿ ಪ್ರಸಕ್ತ ಸಾಲಿನಲ್ಲಿ ಕಬ್ಬು ಬೆಳೆಗಾರರಿಗೆ ಸಹಾಯಧನ ನಿಗದಿಪಡಿಸಲಾಗಿದೆಯೇ ; (ವಿವರಣೆ ಒದಗಿಸುವುದು)

(ಈ) ಪ್ರತಿ ವರ್ಷ ಕಬ್ಬಿಗೆ ವೈಜ್ಞಾನಿಕ ಬೆಲೆ ನಿಗದಿಪಡಿಸಿ ಕಬ್ಬು ಬೆಳೆಗಾರರ ಸಮಸ್ಯೆಗೆ ಶಾಶ್ವತ ಪರಿಹಾರ ಕಂಡುಹಿಡಿಯುವುದಕ್ಕಾಗಿ ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ದೊಡ್ಡ ಗ್ರಾಮ ಪಂಚಾಯಿತಿಗಳನ್ನು ಬೇರ್ಪಡಿಸಿ ಮೇಲ್ದರ್ಜೆಗೆ ಏರಿಸಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೧೩೭ (೨೧೯) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ದೊಡ್ಡ ಗ್ರಾಮ ಪಂಚಾಯಿತಿಗಳನ್ನು ಬೇರ್ಪಡಿಸಿ ಪುರಸಭೆ, ಪಟ್ಟಣ ಪಂಚಾಯಿತಿಗಳನ್ನಾಗಿ ಮೇಲ್ದರ್ಜೆಗೆ ಏರಿಸಿದ ಪುರಸಭೆ, ಪಟ್ಟಣ ಪಂಚಾಯಿತಿಗೆ ಇರಬೇಕಾದ ಮೂಲಭೂತ ಸೌಲಭ್ಯ ಹಾಗೂ ಸಿಬ್ಬಂದಿ ವರ್ಗದವರನ್ನು ಕಲ್ಪಿಸಲಾಗಿದೆಯೇ ;

(ಆ) ಕಲ್ಪಿಸದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಒದಗಿಸಲಾಗುವುದು ;

(ಇ) ಆಡಳಿತ ಹಾಗೂ ಅಭಿವೃದ್ಧಿಯ ಹಿತದೃಷ್ಟಿಯಿಂದ ಮೇಲ್ದರ್ಜೆಗೆ ಏರಿಸಿದ ಪುರಸಭೆ, ಪಟ್ಟಣ ಪಂಚಾಯಿತಿಗಳಿಗೆ ಚುನಾವಣೆಗಳನ್ನು ಯಾವ ಕಾಲಾವಧಿಯೊಳಗೆ ನಡೆಸಲಾಗುವುದು ?

## ಬೆಳಗಾವಿ ಜಿಲ್ಲೆಯ ಕಬ್ಬು ಬೆಳೆಯುವ ರೈತನ ಆತ್ಮಹತ್ಯೆ ಮತ್ತು ಪರಿಹಾರ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೧೩೮ (೨೨೨) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆಯಲ್ಲಿ ಸಕ್ಕರೆ ಕಾರ್ಖಾನೆ ಕಬ್ಬಿನ ಬಾಕಿ ಹಣವನ್ನು ಪಾವತಿ ಮಾಡದ ಕಾರಣ ರೈತನೊಬ್ಬ ಆತ್ಮಹತ್ಯೆ ಮಾಡಿಕೊಂಡು ಸಾವನ್ನಪ್ಪಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ (ವಿವರ ಒದಗಿಸುವುದು) ;

(ಆ) ಆತ್ಮಹತ್ಯೆ ಮಾಡಿಕೊಂಡ ರೈತನ ಕುಟುಂಬಕ್ಕೆ ಸರ್ಕಾರದಿಂದ ಮತ್ತು ಕಾರ್ಖಾನೆಯಿಂದ ಯಾವ ರೀತಿಯ ನೆರವನ್ನು ನೀಡಲಾಗಿದೆ ?

## ಕಬ್ಬು ಬೆಳೆಗಾರರಿಗೆ ಕಾರ್ಖಾನೆಗಳಿಂದ ಹಣ ಪಾವತಿಸಲು ವಿಳಂಬ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೧೩೯ (೨೨೫) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೪–೧೫ನೇ ಸಾಲಿನಲ್ಲಿ ಕಬ್ಬು ಅರೆದ ಯಾವ ಯಾವ ಸಕ್ಕರೆ ಕಾರ್ಖಾನೆಗಳು ಇದುವರೆವಿಗೂ ರೈತರಿಗೆ ಕಬ್ಬಿನ ಹಣ ಪಾವತಿಸಿರುವುದಿಲ್ಲ ; (ವಿವರ ಒದಗಿಸುವುದು)



(ಆ) ಕಬ್ಬು ಕಳಿಸಿದ ಎಷ್ಟು ದಿನಗಳೊಳಗೆ ಸಕ್ಕರೆ ಕಾರ್ಖಾನೆಗಳು ರೈತನಿಗೆ ಪೂರ್ತಿ ಹಣ ನೀಡಬೇಕೆಂಬ ನಿಯಮವಿದೆ ;

(ಇ) ೨೦೧೫–೧೬ನೇ ಸಾಲಿನಲ್ಲಿ ನೀಡಿದ ಕಬ್ಬಿಗೆ ರೈತರಿಂದ ಇದುವರೆಗೆ ಬಾಕಿ ಉಳಿಸಿಕೊಂಡಿರುವ ಸಕ್ಕರೆ ಕಾರ್ಖಾನೆಗಳು ಯಾವುವು ; (ವಿವರ ನೀಡುವುದು)

(ಈ) ರೈತರುಗಳಿಗೆ ಬಾಕಿ ಹಣ ನೀಡುವ ಸಂಬಂಧ ಯಾವ ರೀತಿಯ ಕ್ರಮ ಕೈಗೊಳ್ಳಲಾಗುವುದು ?

## ಹಾವೇರಿ ಜಿಲ್ಲೆ ಹಾನಗಲ್ ತಾಲ್ಲೂಕಿನಲ್ಲಿ ಮ್ಯಾಂಗೋಪಾರ್ಕ್ ಸ್ಥಾಪಿಸುವ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೧೪೦ (೨೨೬) ಮಾನ್ಯ ಕೃಷಿ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾವೇರಿ ಜಿಲ್ಲೆಯ ಹಾನಗಲ್ ತಾಲ್ಲೂಕಿನಲ್ಲಿ ಉತ್ಕೃಷ್ಟ ದರ್ಜೆಯ ಮಾವಿನ ಬೆಳೆ ಬೆಳೆಯುತ್ತಿರುವುದು ನಿಜವೇ; ನಿಜವಾಗಿದ್ದಲ್ಲಿ, ಇಲ್ಲಿ ಬೆಳೆಯುವ ಮಾವಿನ ಬೆಳೆಯ ಪ್ರದೇಶದ ವ್ಯಾಪ್ತಿ, ಪ್ರಮಾಣ ಹಾಗೂ ಮಾವಿನ ವಿವಿಧ ಬಗೆ ಮತ್ತು ವಿಶೇಷತೆಗಳೇನು ; (ವಿವರ ಒದಗಿಸುವುದು)

(ಆ) ಇಲ್ಲಿ ಬೆಳೆಯುವ ಮಾವು ವಿದೇಶಗಳಿಗೂ ರಫ್ತಾಗುತ್ತಿರುವುದು ನಿಜವೇ ;

(ಇ) ಇಲ್ಲಿ ಸೂಕ್ತ ಹಣ್ಣಿನ ಮಾರುಕಟ್ಟೆಯ ಕೊರತೆ ಇರುವುದು ನಿಜವೇ ;

(ಈ) ಇಲ್ಲಿ ಒಂದು ಮ್ಯಾಂಗೋ ಪಾರ್ಕ್ ಸ್ಥಾಪಿಸುವ ಕುರಿತು ಸರ್ಕಾರದ ನಿಲುವೇನು ?

### ಶಿರಾಡಿ ಘಾಟ್ ರಸ್ತೆ ಅಭಿವೃದ್ಧಿ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೧೪೧ (೨೨೩) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಿರಾಡಿ ಘಾಟ್ ರಸ್ತೆ ಅಭಿವೃದ್ಧಿ ಕಾರ್ಯದಲ್ಲಿ ವಿಳಂಬವಾಗಿರುವುದು ನಿಜವೇ ; ಇದಕ್ಕೆ ಕಾರಣಗಳೇನು ; ಇದು ಪೂರ್ಣಗೊಳ್ಳಲು ಬೇಕಾಗುವ ಕಾಲಾವಧಿ ಏನು ; ಇದಕ್ಕೆ ಪರ್ಯಾಯವಾಗಿ ಅನುವು ಮಾಡಿಕೊಡಲಾಗಿದ್ದ ಮಾರ್ಗಗಳು ಯಾವುವು ; ಪ್ರಸ್ತುತ ಅನುವು ಮಾಡಿಕೊಡಲಾಗಿರುವ ಪರ್ಯಾಯ ಮಾರ್ಗಗಳು ಹದಗೆಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ತಕ್ಷಣಕ್ಕೆ ಸದರಿ ಪರ್ಯಾಯ ಮಾರ್ಗಗಳಲ್ಲಿ ಶೀಘ್ರವಾಗಿ ಗುಂಡಿಗಳನ್ನು ಮುಚ್ಚುವ ಮತ್ತು ರಸ್ತೆ ತೇಪೆ ಕಾರ್ಯ ಮಾಡುವ ಮೂಲಕ ಸಾರ್ವಜನಿಕರು ವಾಹನಗಳಲ್ಲಿ ಸಂಚರಿಸಲು ಅನುಕೂಲ ಕಲ್ಪಸಲಾಗುವುದೇ ?

### ರೈತರಿಗೆ ಬಾಕಿ ಹಣ ಪಾವತಿ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೧೪೨ (೨೨೪) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೆಲವು ಸಕ್ಕರೆ ಕಾರ್ಖಾನೆಗಳಲ್ಲಿ ರೈತರಿಗೆ ಬಾಕಿ ಪಾವತಿಸುವ ವಿಚಾರದಲ್ಲಿ ಆರು ತಿಂಗಳ ಹಿಂದಿನ ದಿನಾಂಕ ನಮೂದಿಸಿ



೧೦೦/– ರೂ ಕಡಿಮೆ ಮೊತ್ತದ ಚೆಕ್ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ (ವಿವರ ನೀಡುವುದು) ;

(ಆ) ಈ ಸಂಬಂಧ ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ ; ರೈತರಿಗೆ ಯಾವ ರೀತಿಯ ನ್ಯಾಯ ಒದಗಿಸಲಾಗಿದೆ ?

### ಕೃಷಿ ಇಲಾಖೆಯ ಮಣ್ಣು ಪರೀಕ್ಷಾ ಕೇಂದ್ರಗಳನ್ನು ಮುಚ್ಚುತ್ತಿರುವ ಕುರಿತು

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು):–**

೧೪೩ (೨೨೭) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕೃಷಿ ಇಲಾಖೆಯ ಮತ್ತು ಕೃಷಿ ವಿಶ್ವ ವಿದ್ಯಾಲಯಗಳಲ್ಲಿರುವ ಮಣ್ಣು ಪರೀಕ್ಷಾ ಕೇಂದ್ರಗಳೆಷ್ಟು ; ಇವುಗಳ ಪೈಕಿ ಹಾಲಿ ಕಾರ್ಯ ನಿರ್ವಹಿಸುತ್ತಿರುವ ಕೇಂದ್ರಗಳೇಷ್ಟು ;

(ಆ) ಕೃಷಿ ಇಲಾಖೆಯ ವಿಶ್ವವಿದ್ಯಾಲಯಗಳಲ್ಲಿ ಮಣ್ಣು ಪರೀಕ್ಷಾ ಕೇಂದ್ರಗಳಲ್ಲಿ ಯಾವ ಪೋಷಕಾಂಶಗಳ ಪರೀಕ್ಷೆ ಮಾಡಲಾಗುತ್ತಿದೆ ಮತ್ತು ಇದಕ್ಕೆ ವಿಧಿಸುತ್ತಿರುವ ಶುಲ್ಕವೆಷ್ಟು ;

(ಇ) ರಾಜ್ಯದಲ್ಲಿರುವ ಖಾಸಗಿ ಮಣ್ಣು ಪರೀಕ್ಷಾ ಕೇಂದ್ರಗಳೆಷ್ಟು ; ಇವುಗಳಲ್ಲಿ ಎಲ್ಲಾ ಲಘು ಪೋಷಕಾಂಶಗಳನ್ನು ಪರೀಕ್ಷೆ ಮಾಡಲು ವಿಧಿಸುವ ಶುಲ್ಕವೆಷ್ಟು ;

(ಈ) ರೈತರಿಗೆ ಹೊರೆಯಾಗದಂತೆ ಎಲ್ಲಾ ಬಗೆಯ ಲಘು ಪೋಷಕಾಂಶಗಳನ್ನು ಕಡಿಮೆ ಶುಲ್ಕದಲ್ಲಿ ಪರೀಕ್ಷೆ ಮಾಡಿಸಲು ಕೈಗೊಂಡಿರುವ ಕ್ರಮಗಳೇನು ?

## ಕೃಷಿಗೆ ಇಂಧನ ಒದಗಿಸುವ ಬಗ್ಗೆ

**ಡಾ॥ ಮತ್ತಿಕಟ್ಟೆ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೪೪೪ (೨೨೮) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಇಂಧನ ಕೊರತೆಯಿಂದಾಗಿ ಕೃಷಿ ಮತ್ತು ಔದ್ಯೋಗಿಕ ಕ್ಷೇತ್ರಗಳಲ್ಲಿನ ಅಭಿವೃದ್ಧಿ ಕುಂಠಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಇಂಧನ ಕೊರತೆ ನಿವಾರಿಸಲು ಸರ್ಕಾರವು ಕೈಗೊಳ್ಳುತ್ತಿರುವ ಕ್ರಮಗಳೇನು ;

(ಇ) ಯಾವ ಯಾವ ರೀತಿಯಲ್ಲಿ ಅಸಾಂಪ್ರದಾಯಕ ಮೂಲಗಳಿಂದ ಎಷ್ಟೆಷ್ಟು ಇಂಧನವನ್ನು ಉತ್ಪಾದಿಸಲಾಗುತ್ತಿದೆ ;

(ಈ) ಚಾವಣಿ ಸೌರವಿದ್ಯುತ್ ಯೋಜನೆಯನ್ನು ವ್ಯಾಪಕವಾಗಿ ಕಾರ್ಯಗತಗೊಳಿಸಲಾಗುವುದೇ ;

(ಉ) ಸರ್ಕಾರವು ವಿಧಾನಸೌಧ, ವಿಕಾಸಸೌಧ, ಬೆಳಗಾವಿಯ ಸುವರ್ಣಸೌಧ ಮತ್ತು ಬೆಂಗಳೂರಿನ ಬಹುಮಹಡಿಗಳ ಕಟ್ಟಡಗಳ ಚಾವಣಿಗಳ ಮೇಲೆ ಸೌರವಿದ್ಯುತ್ ಉತ್ಪಾದಿಸಲು ಕ್ರಮ ಕೈಗೊಳ್ಳುವುದೇ ; ಹಾಗಿದ್ದಲ್ಲಿ ಯಾವಾಗ ?



## ಗ್ರಾಮಪಂಚಾಯತ್‌ಗಳನ್ನು ಉನ್ನತೀಕರಿಸುವ ಬಗ್ಗೆ

**ಶ್ರೀ ಐವನ್ ಡಿಸೋಜಾ (ನಾಮನಿರ್ದೇಶನ ಹೊಂದಿದವರು) :–**

೧೪೫೫ (೨೨೯) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೩–೧೪ ಮತ್ತು ೨೦೧೪–೧೫ರಲ್ಲಿ ಎಷ್ಟು ಗ್ರಾಮಪಂಚಾಯತ್‌ಗಳನ್ನು ನಗರ ಪಂಚಾಯತ್ ಮತ್ತು ಪುರಸಭೆಗಳನ್ನಾಗಿ ಮೇಲ್ದರ್ಜೆಗೇರಿಸಲಾಗಿದೆ ; (ಜಿಲ್ಲಾವಾರು ವಿವರ ಒದಗಿಸುವುದು)

(ಆ) ೨೦೧೪–೧೫ರಲ್ಲಿ ಉಡುಪಿ ಜಿಲ್ಲೆಯ ಕಾಪು ಪಂಚಾಯತ್‌ನ್ನು ಪುರಸಭೆಯಾಗಿ ಮೇಲ್ದರ್ಜೆಗೇರಿಸಿದ್ದು, ಈ ಪುರಸಭೆಗೆ ಚುನಾವಣೆಯನ್ನು ನಡೆಸಲು ಚುನಾವಣಾ ಆಯುಕ್ತರಿಗೆ ತಿಳಿಸಲಾಗಿದೆಯೇ ; ಚುನಾವಣೆ ನಡೆಸಲಾಗುವುದು ಯಾವಾಗ ;

(ಇ) ಪುರಸಭೆ ಮತ್ತು ನಗರಸಭೆ ಸದಸ್ಯರ ಗೌರವಧನವನ್ನು ಹೆಚ್ಚಿಸಬೇಕೆಂಬ ಬೇಡಿಕೆ ಸರ್ಕಾರದ ಮುಂದಿದೆಯೇ ;

(ಈ) ಉಡುಪಿ ಜಿಲ್ಲೆಯ ಶಿರ್ವಪಡು ಬಿದ್ರಿ ಪಂಚಾಯತ್‌ಗಳನ್ನು ಉನ್ನತೀಕರಿಸಲು ಬೇಕಾದಷ್ಟು ಜನಸಂಖ್ಯೆ ಇದ್ದರೂ ಮೇಲ್ದರ್ಜೆಗೇರಿಸದಿರಲು ಕಾರಣಗಳೇನು (ವಿವರ ನೀಡುವುದು)

## ಕ್ರೈಸ್ತ ಅಲ್ಪಸಂಖ್ಯಾತ ಪರಿಷತ್ತಿಗೆ ಅನುದಾನ.

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೧೪೬ (೨೩೦) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೪–೧೫ನೇ ಸಾಲಿನಲ್ಲಿ ಕ್ರೈಸ್ತ ಅಲ್ಪಸಂಖ್ಯಾತ ಪರಿಷತ್ತಿಗೆ ಸರ್ಕಾರದಿಂದ ಬಿಡುಗಡೆಗೊಳಿಸಿದ ಅನುದಾನ ಎಷ್ಟು ; ಈ ಅನುದಾನವನ್ನು ಯಾವ ಯಾವ ಯೋಜನೆಗಳಿಗೆ ಉಪಯೋಗಿಸಲಾಗಿದೆ (ಯೋಜನೆವಾರು ವಿವರ ಒದಗಿಸುವುದು)

(ಆ) ಅಲ್ಪಸಂಖ್ಯಾತ ಅಭಿವೃದ್ಧಿ ನಿಗಮದಿಂದ ವಿವಿಧ ಯೋಜನೆಯಡಿಯಲ್ಲಿ ನೀಡಿರುವ ಸಹಾಯಧನವೆಷ್ಟು ; (ಸಂಪೂರ್ಣ ವಿವರ ನೀಡುವುದು)

(ಇ) ವಿವಿಧ ಯೋಜನೆಯಡಿಯಲ್ಲಿ ಅನುದಾನ ಪಡೆದ ಮುಸ್ಲಿಂ, ಕ್ರೈಸ್ತ, ಜೈನ ಅಲ್ಪಸಂಖ್ಯಾತರುಗಳ ಸಂಖ್ಯೆ ಎಷ್ಟು ? (ಅನುದಾನದ ಶೇಕಡವಾರು ವಿವರ ಒದಗಿಸುವುದು)

## ಮಂಗಳೂರು ನಗರದ ಸರ್ಕಾರಿ ವಸತಿ ಗೃಹಗಳ ಬಗ್ಗೆ.

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೧೪೭ (೨೩೨) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಗಳೂರು ನಗರದ ಸರ್ಕಾರಿ ವಸತಿ ಗೃಹಗಳ ರಿಪೇರಿಗಾಗಿ/ ದುರಸ್ತಿಗಾಗಿ ಬಿಡುಗಡೆಗೊಳಿಸಲಾದ ಅನುದಾನ ಎಷ್ಟು ; ಎಷ್ಟು ವಸತಿ ಗೃಹಗಳನ್ನು ದುರಸ್ತಿಪಡಿಸಲಾಗಿದೆ ; (ದುರಸ್ತಿಗೊಳಿಸಲಾದ ವಸತಿ ಗೃಹಗಳ ವಿವರ ಹಾಗೂ ತಗುಲಿದ ವೆಚ್ಚದ ವಿವರ ಒದಗಿಸುವುದು)



(ಆ) ವಸತಿಗೆ ಯೋಗ್ಯವಲ್ಲದ ವಸತಿ ಗೃಹಗಳನ್ನು ಕೆಡವಿ ಹೊಸ ವಸತಿ ಗೃಹಗಳನ್ನು ನಿರ್ಮಾಣ ಮಾಡಲು ಇಲಾಖೆ ಕೈಗೊಂಡ ಕ್ರಮಗಳೇನು ; ಸರ್ಕಾರಿ ನೌಕರರಿಗೆ ವಸತಿ ಸಮುಚ್ಚಯ ನಿರ್ಮಾಣ ಮಾಡಿ ವಸತಿ ಗೃಹಗಳನ್ನು ವಿತರಿಸಲು ಎಷ್ಟು ಅನುದಾನವನ್ನು ಮೀಸಲಿಡಲಾಗಿದೆ ;

(ಇ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿರುವ ಒಟ್ಟು ವಸತಿ ಗೃಹಗಳ ಸಂಖ್ಯೆ ಎಷ್ಟು ಮತ್ತು ಅವುಗಳ ದುರಸ್ತಿಗಾಗಿ ಬಿಡುಗಡೆಗೊಳಿಸಿದ ಅನುದಾನ ಎಷ್ಟು ; (ವಿವರ ಒದಗಿಸುವುದು)

(ಈ) ಸರ್ಕಾರಿ ನೌಕರರಿಗೆ ವಸತಿ ಗೃಹಗಳ ಸಮುಚ್ಚಯ (Flat Type) ಗೃಹಗಳನ್ನು ರಚಿಸಲು ಮೀಸಲಿಟ್ಟ ಅನುದಾನ ಎಷ್ಟು ; ನಿರ್ಮಾಣ ಕಾರ್ಯವನ್ನು ಯಾವಾಗ ಪ್ರಾರಂಭಿಸಲಾಗುವುದು ?

## ಕ್ರೈಸ್ತ ಅಲ್ಪಸಂಖ್ಯಾತರ ಪರಿಷತ್ತನ್ನು ನಿಗಮ ಮಾಡುವ ಬೇಡಿಕೆ ಬಗ್ಗೆ.

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೧೪೮ (೨೩೧) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕ್ರೈಸ್ತ ಅಲ್ಪಸಂಖ್ಯಾತರ ಪರಿಷತ್ತನ್ನು ನಿಗಮ ಮಾಡಬೇಕೆಂಬ ಬೇಡಿಕೆಯನ್ನು ಇಲಾಖೆ ಪರಿಗಣಿಸಿದೆಯೇ ; ಪರಿಗಣಿಸದಿದ್ದಲ್ಲಿ ಕಾರಣಗಳೇನು ;

(ಆ) ಕ್ರೈಸ್ತ ಅಲ್ಪಸಂಖ್ಯಾತ ಪರಿಷತ್ತಿನಿಂದ ವಿವಿಧ ಅಭಿವೃದ್ಧಿ ಕಾರ್ಯಕ್ರಮಗಳಿಗಾಗಿ ಅರ್ಜಿದಾರರಿಗೆ ಬಿಡುಗಡೆಗೊಳಿಸಿದ ಮೊತ್ತ ಎಷ್ಟು ; (ವಿವರ ನೀಡುವುದು)

(ಇ) ೨೦೧೩–೧೪ರಲ್ಲಿ ಬಿಡುಗಡೆಗೊಳಿಸಿದ ಅನುದಾನ ಎಷ್ಟು ; ಬಳಕೆ ಆಗಿರುವ ಮತ್ತು ಬಳಕೆಯಾಗದೆ ಇರುವ ಅನುದಾನ ಎಷ್ಟು ; ಇದಕ್ಕೆ ಕಾರಣಗಳೇನು ; (ವಿವರ ನೀಡುವುದು)

(ಈ) ೨೦೧೪–೧೫ರಲ್ಲಿ ಕ್ರೈಸ್ತ ಅಲ್ಪಸಂಖ್ಯಾತರ ಪರಿಷತ್ತು ಎಷ್ಟು ಸಭೆಗಳನ್ನು ನಡೆಸಿದೆ ; ಸದರಿ ಸಭೆಯಲ್ಲಿ ಕೈಗೊಂಡ ನಿರ್ಣಯಗಳೇನು ? (ಸಭೆಯ ದಿನಾಂಕ ಸಹಿತ ಸಂಪೂರ್ಣ ವಿವರ ನೀಡುವುದು)

## ಬೈಕಂಪಾಡಿಯಲ್ಲಿರುವ ಕೃಷಿ ಉತ್ಪನ್ನ ಮಾರುಕಟ್ಟೆ ಪ್ರಾಂಗಣದ ವಹಿವಾಟು ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೧೪೯ (೨೩೩) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೈಕಂಪಾಡಿಯಲ್ಲಿರುವ ಕೃಷಿ ಉತ್ಪನ್ನ ಮಾರುಕಟ್ಟೆ ಪ್ರಾಂಗಣದಲ್ಲಿ ವರ್ತಕರು ವಹಿವಾಟು ನಡೆಸದೇ ಇರಲು ಕಾರಣವೇನು ; ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಆ) ಮಂಗಳೂರು ಎ.ಪಿ.ಎಂ.ಸಿ.ಯಡಿಯಲ್ಲಿ ಎಷ್ಟು ಕಡೆಗಳಲ್ಲಿ ಪ್ರಾಂಗಣವನ್ನು ರಚಿಸಲಾಗಿದೆ ; (ವಿವರ ನೀಡುವುದು) ಬೈಕಂಪಾಡಿಯಲ್ಲಿರುವ ಎ.ಪಿ.ಎಂ.ಸಿ ಮಾರುಕಟ್ಟೆಯಲ್ಲಿ ಎಷ್ಟು



ಗೋದಾಮುಗಳು ಖಾಲಿ ಇದೆ ; ಇದರಿಂದ ಉಂಟಾಗುವ ನಷ್ಟ ಎಷ್ಟು ; (ವಿವರ ನೀಡುವುದು)

(ಇ) ಬೈಕಂಪಾಡಿಯಲ್ಲಿರುವ ಎ.ಪಿ.ಎಂ.ಸಿ. ಮಾರುಕಟ್ಟೆ ಪ್ರಾಂಗಣವು ಬಳಸದೇ ಇರುವುದರಿಂದ ಇತರೆ ಸರ್ಕಾರಿ ಇಲಾಖೆಗಳಿಗೆ ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; (ಇದ್ದರೆ ವಿವರ ಒದಗಿಸುವುದು)

(ಈ) ಮಂಗಳೂರು ಕೃಷಿ ಉತ್ಪನ್ನ ಮಾರುಕಟ್ಟೆಯಲ್ಲಿ ನೋಂದಾಯಿತ ವರ್ತಕರ ಸಂಖ್ಯೆ ಎಷ್ಟು ? (ನೊಂದಾಯಿತ ವರ್ತಕರ ವಿವರ ನೀಡುವುದು)

## ರಾಜ್ಯದಲ್ಲಿ ಕಬ್ಬು ಬೆಳೆಗಾರರಿಗೆ ಬಾಕಿ ಹಣ ಪಾವತಿಸುವ ಬಗ್ಗೆ.

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೧೫೦ (೨೩೫) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ಸಕ್ಕರೆ ಕಾರ್ಖಾನೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕಬ್ಬು ಬೆಳೆಗಾರರಿಗೆ ಈವರೆಗೆ ಬಾಕಿ ಉಳಿಸಿಕೊಂಡಿರುವ ಹಣವೆಷ್ಟು (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಈ ಹಿಂದೆ ಸರ್ಕಾರವು ಕಬ್ಬು ಬೆಳೆಗಾರರಿಗೆ ಬಾಕಿ ಹಣವನ್ನು ಪಾವತಿ ಮಾಡಲು ಕ್ರಮ ತೆಗೆದುಕೊಳ್ಳುವುದಾಗಿ ತಿಳಿಸಿದರೂ ಈವರೆಗೆ ಪಾವತಿ ಆಗದೆ ಇರಲು ಕಾರಣಗಳೇನು ;

(ಈ) ಸರ್ಕಾರವು ಸಕ್ಕರೆ ಕಾರ್ಖಾನೆಗಳ ಮಾಲೀಕರಿಂದ ಯಾವಾಗ ಹಣ ಪಾವತಿಗೆ ಕ್ರಮ ಕೈಗೊಳ್ಳುವುದು ?

## ರಾಜ್ಯದಲ್ಲಿನ ರಾಷ್ಟ್ರೀಯ ಹೆದ್ದಾರಿಗಳಲ್ಲಿರುವ ಮಾಹಿತಿ ಫಲಕಗಳ ಕುರಿತು.

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೧೫೧ (೨೩೪) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ರಾಷ್ಟ್ರೀಯ ಹೆದ್ದಾರಿಗಳ ಇಕ್ಕೆಲಗಳಲ್ಲಿ ಅಳವಡಿಸಲಾಗಿರುವ ಮಾಹಿತಿ ಫಲಕಗಳು ಸ್ಪಷ್ಟವಾಗಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಫಲಕಗಳನ್ನು ಹಾಕಲು ಇರುವ ಮಾನದಂಡಗಳೇನು ;

(ಇ) ಈಗಿರುವ ಅಪೂರ್ಣ ಮತ್ತು ತಪ್ಪು ಮಾಹಿತಿಯಿಂದ ಸಾರ್ವಜನಿಕರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಇದನ್ನು ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ವಿದ್ಯುತ್ ಸರಬರಾಜು ನಿಗಮವು ಉಪಯೋಗಿಸುವ ವಿದ್ಯುತ್ ಕಂಬಗಳ ಕುರಿತು.

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೧೫೨ (೨೩೬) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿದ್ಯುತ್ ಸರಬರಾಜು ನಿಗಮವು ಉಪಯೋಗಿಸುವ ವಿದ್ಯುತ್ ಕಂಬಗಳ ತಯಾರಿಕೆಯು ರಾಜ್ಯದ ಯಾವ ಯಾವ ಸ್ಥಳಗಳಲ್ಲಿ ಆಗುತ್ತದೆ ;

(ಆ) ಈ ಕಂಬಗಳನ್ನು ತಯಾರಿಸುವ ಸಂದರ್ಭದಲ್ಲಿ ಗುಣನಿಯಂತ್ರಣದ ಬಗ್ಗೆ ಇರುವ ಮಾನದಂಡಗಳೇನು ;



(ಇ) ಕಳಪೆ ಗುಣಮಟ್ಟದ ಕಂಬಗಳನ್ನು ರಸ್ತೆ ಬದಿಗಳಲ್ಲಿ ನೆಡುತ್ತಿರುವುದರಿಂದ ಅಪಘಾತಗಳು ಆಗುತ್ತಿದ್ದು, ಇದನ್ನು ತಡೆಗಟ್ಟಲು ಸರ್ಕಾರ ತೆಗೆದುಕೊಂಡ ಕ್ರಮವೇನು ?

## ಕ್ಯಾಲ್ಸಿಯಂ ಕಾರ್ಬೈಡ್ ಬಳಸಿ ಕೃತಕವಾಗಿ ಹಣ್ಣುಗಳನ್ನು ಮಾಗಿಸುತ್ತಿರುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೧೫೩ (೨೩೮) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಇತ್ತೀಚೆಗೆ ಹಣ್ಣುಗಳನ್ನು ಕೃತಕವಾಗಿ ಮಾಗಿಸಲು ಕ್ಯಾಲ್ಸಿಯಂ ಕಾರ್ಬೈಡ್ ಬಳಸುತ್ತಿರುವುದರಿಂದ ಆರೋಗ್ಯದ ಮೇಲೆ ವ್ಯತಿರಿಕ್ತ ಪರಿಣಾಮ ಉಂಟು ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ರಾಸಾಯನಿಕ ಬಳಕೆಯನ್ನು ನಿಷೇಧಿಸಲು ಕೈಗೊಂಡಿರುವ ಕ್ರಮಗಳೇನು ;

(ಆ) ಸರ್ಕಾರ ಈವರೆಗೆ ಹಣ್ಣು ಸಂರಕ್ಷಣ ಕೇಂದ್ರ ಹಾಗೂ ಮಳಿಗೆಗಳ ತಪಾಸಣೆ ನಡೆಸಿದೆಯೇ ? (ನಡೆಸಿದ್ದಲ್ಲಿ, ತಪಾಸಣಾ ವಿವರ ಒದಗಿಸುವುದು)

## ಯಶಸ್ವಿ ಯೋಜನೆ ಬಗ್ಗೆ

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೪ (೨೩೯) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೦–೨೦೧೧ರಿಂದ ೨೦೧೩–೨೦೧೪ನೇ ಸಾಲಿನಲ್ಲಿ ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿ ಯಶಸ್ವಿನಿ ಯೋಜನೆಯ

ನೋಂದಾಯಿತ ಫಲಾನುಭವಿಗಳ ಸಂಖ್ಯೆ ಎಷ್ಟು ; ಸಂಗ್ರಹಿಸಲಾದ ಒಟ್ಟು ಮೊತ್ತವೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಸದರಿ ವರ್ಷದಲ್ಲಿ ಈ ಯೋಜನೆಯಿಂದ ಚಿಕಿತ್ಸಾ ಪ್ರಯೋಜನ ಪಡೆದವರ ಸಂಖ್ಯೆ ಹಾಗೂ ಭರಿಸಲಾದ ವೆಚ್ಚವೆಷ್ಟು ; (ಆಸ್ಪತ್ರೆವಾರು ತಾಲ್ಲೂಕುವಾರು ವಿವರ ನೀಡುವುದು)

(ಇ) ಯಶಸ್ವಿನಿ ಯೋಜನೆ ರೈತರ ಆರೋಗ್ಯ ರಕ್ಷಣಾ ಯೋಜನೆಯಲ್ಲಿ ಎಫ್.ಎಚ್.ಪಿ.ಎನ್ ನಿಂದ ಅನುಮತಿ ನೀಡಲು ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ವಿಳಂಬಕ್ಕೆ ಕಾರಣಗಳೇನು ;

(ಈ) ಈ ವಿಳಂಬವನ್ನು ಸರಿಪಡಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಕಲಬುರಗಿ–ಯಾದಗಿರ ಜಿಲ್ಲೆ ತೋಟಗಾರಿಕೆ ಇಲಾಖೆ ಅನುಷ್ಠಾನದ ಬಗ್ಗೆ.

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೫೫ (೨೪೦) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಮತ್ತು ಯಾದಗಿರ ಜಿಲ್ಲೆಯಲ್ಲಿ ತೋಟಗಾರಿಕೆ ಇಲಾಖೆಯಿಂದ ಅನುಷ್ಠಾನಗೊಂಡಿರುವ ಯೋಜನೆಗಳು ಯಾವುವು ; ಅವುಗಳಿಗೆ ವೆಚ್ಚ ಮಾಡಿದ ಹಣವೆಷ್ಟು ; (ಯೋಜನಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಪ್ರಸಕ್ತ ಸಾಲಿನಲ್ಲಿ ಇಲಾಖೆಯ ವತಿಯಿಂದ ಜಿಲ್ಲೆಯಲ್ಲಿ ಹಮ್ಮಿಕೊಳ್ಳಲು ಉದ್ದೇಶಿಸಿರುವ ಯೋಜನೆಗಳಾವುವು ; ಅವುಗಳ ರೂಪರೇಷಗಳೇನು ?



## ರಾಜ್ಯದಲ್ಲಿ ಬೆಳೆ ವಿಮೆ ಯೋಜನೆ ಬಗ್ಗೆ.

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೫೬ (೨೪೧) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಬೆಳೆ ವಿಮಾ ಯೋಜನೆಯನ್ನು ಯಾವ ಯಾವ ಜಿಲ್ಲೆಯಲ್ಲಿ ಎಂದಿನಿಂದ ಜಾರಿಗೆ ತರಲಾಗಿದೆ ;

(ಆ) ಈ ಯೋಜನೆಯ ಅಡಿಯಲ್ಲಿ ಬರುವ ಬೆಳೆಗಳು ಯಾವುವು ;

(ಇ) ಈ ಯೋಜನೆ ಅಡಿಯಲ್ಲಿ ರೈತರು ಭರಿಸಬೇಕಾದ ವಿಮೆಯ ಹಣದ ಪ್ರಮಾಣವೆಷ್ಟು ; ಇಲ್ಲಿಯವರೆಗೆ ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿ ಎಷ್ಟು ಜನ ರೈತರು ಈ ಯೋಜನೆಯ ಪ್ರಯೋಜನೆ ಪಡೆದಿದ್ದಾರೆ ; (ತಾಲ್ಲೂಕುವಾರು ವಿವರ ನೀಡುವುದು)

(ಈ) ೨೦೧೩–೧೪ನೇ ಸಾಲಿಗೆ ಈ ಯೋಜನೆಗೆ ಒದಗಿಸಲಾದ ಹಣ ಎಷ್ಟು ; ಪ್ರತಿವರ್ಷ ಆದ ವಾಸ್ತವಿಕ ವಿನಿಯೋಗ ಎಷ್ಟು ?

## ಸಹಕಾರ ಇಲಾಖೆಯಿಂದ ರೈತರಿಗೆ ವಿವಿಧ ಶ್ರೇಣಿ ಬಡ್ಡಿ ದರದಲ್ಲಿ ವ್ಯವಸಾಯ ಸಾಲ ನೀಡಿಕೆ ಬಗ್ಗೆ.

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು):–**

೧೫೭ (೨೪೨) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಹಕಾರ ಇಲಾಖೆಯಿಂದ ರೈತರಿಗೆ ವಿವಿಧ ಶ್ರೇಣಿ ಬಡ್ಡಿ ದರದಲ್ಲಿ ವ್ಯವಸಾಯ ಸಾಲ ಕೊಡುತ್ತಿರುವುದು ನಿಜವೆ ;

(ಆ) ಹಾಗಾದರೆ, ಯಾವ ಯಾವ ಶ್ರೇಣಿ ಬಡ್ಡಿ ದರದಲ್ಲಿ ಸಾಲ ನೀಡುವ ಕನಿಷ್ಠ ಮತ್ತು ಗರಿಷ್ಠ ಸಾಲದ ಮೊತ್ತವೆಷ್ಟು ; (ಪೂರ್ಣ ವಿವರ ಒದಗಿಸುವುದು)

(ಇ) ೨೦೧೪–೧೫ನೇ ಸಾಲಿನಲ್ಲಿ ಒಟ್ಟು ನೀಡಿರುವ ಸಾಲದ ಮೊತ್ತವೆಷ್ಟು, ಸಾಲದ ಬಡ್ಡಿ ದರ ಹಾಗೂ ಶ್ರೇಣಿ ಪ್ರಕಾರ ವಿತರಿಸಿರುವ ಸಾಲದ ಒಟ್ಟು ಮೊತ್ತ ಅದಕ್ಕೆ ಸಂಬಂಧಪಟ್ಟ ಫಲಾನುಭವಿಗಳ ಸಂಖ್ಯೆ ಎಷ್ಟು ;(ಪೂರ್ಣ ವಿವರ ಒದಗಿಸುವುದು)

(ಈ) ಕನಿಷ್ಠ ಮತ್ತು ಗರಿಷ್ಠ ಸಾಲ ನೀಡಿಕೆಗೆ ಅಳವಡಿಸುತ್ತಿರುವ ಮಾನದಂಡಗಳೇನು ? (ವಿವರ ನೀಡುವುದು)

## ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ನೀಡುವ ಕುರಿತು.

**ಶ್ರೀ ಜೆ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೫೮ (೨೫೦) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ವರ್ಷದಿಂದ ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ನೀಡಲಾಗುತ್ತಿರುವ ವಿದ್ಯಾರ್ಥಿ ವೇತನ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ಅವಧಿಯಲ್ಲಿ ವಿದ್ಯಾರ್ಥಿ ವೇತನ ಕೋರಿ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು ; ಆ ಪೈಕಿ ಮಂಜೂರಾದ ಅರ್ಜಿಗಳ ಸಂಖ್ಯೆ ಎಷ್ಟು ; ಬಾಕಿ ಇರುವ ಅರ್ಜಿಗಳ ಸಂಖ್ಯೆ ಎಷ್ಟು ; ಸದರಿ ಅರ್ಜಿಗಳನ್ನು ಯಾವ ಕಾಲ ಮಿತಿಯೊಳಗೆ ಮಂಜೂರು ಮಾಡಲಾಗುವುದು ;



(ಇ) ವಿದ್ಯಾರ್ಥಿಗಳಿಗೆ ನೀಡಿರುವ ವಿದ್ಯಾರ್ಥಿ ವೇತನದಲ್ಲಿ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಪಾಲಿನ ಮೊತ್ತ ಎಷ್ಟು ?

## ಶೀಥಲೀಕರಣ ಕೇಂದ್ರಗಳ ನಿರ್ಮಾಣ.

**ಶ್ರೀ ಜೆ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೫೯ (೨೫೧) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಶೀಥಲೀಕರಣ ಕೇಂದ್ರಗಳನ್ನು ನಿರ್ಮಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ವಿಜಯಪುರ ಜಿಲ್ಲೆಯಲ್ಲಿ ದ್ರಾಕ್ಷಿ ಬೆಳೆ ಹೆಚ್ಚಾಗಿ ಬೆಳೆಯುತ್ತಿದ್ದು, ಅಲ್ಲಿ ಶೀಥಲೀಕರಣ ಕೇಂದ್ರಗಳನ್ನು ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ ;

(ಇ) ಹಾಗಿದ್ದಲ್ಲಿ, ಶೀಥಲೀಕರಣ ಕೇಂದ್ರಗಳನ್ನು ಸ್ಥಾಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಈ ನಿಟ್ಟಿನಲ್ಲಿ ಆಗಿರುವ ಪ್ರಗತಿ ಏನು ?

## ರೈತರಿಗೆ ಅಥವಾ ಹನಿ ನೀರಾವರಿಗೆ ಸಬ್ಸಿಡಿ ನೀಡುವ ಕುರಿತು.

**ಶ್ರೀ ಜೆ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೬೦ (೨೪೯) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉತ್ತರ ಕರ್ನಾಟಕದಲ್ಲಿ ಮಳೆಯ ಪ್ರಮಾಣ ಕಡಿಮೆ ಆಗಿದ್ದು ಹನಿ ನೀರಾವರಿಗೆ ಹೆಚ್ಚಿನ ನೆರವು ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ಮಳೆ ನೀರಿನ ಕೊಯಿಲು ಪದ್ಧತಿ ಸಮರ್ಪಕವಾಗಿ ಬಳಕೆ ಆಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ ಏನು ಕ್ರಮ ತೆಗೆದುಕೊಳ್ಳಲಾಗಿದೆ ; (ವಿವರ ನೀಡುವುದು)

(ಇ) ರಾಜ್ಯದ ಕೃಷಿಗೆ ಎಷ್ಟು ಹಣವನ್ನು ಬಳಸಲಾಗಿದೆ ಮತ್ತು ಉತ್ತರ ಕರ್ನಾಟಕಕ್ಕೆ ಎಷ್ಟು ಹಣ ಬಳಸಲಾಗಿದೆ ? (ವಿವರಣೆ ನೀಡುವುದು)

## ಅವಳಿ ಜಿಲ್ಲೆಯಲ್ಲಿರುವ ಸರ್ಕಾರಿ ವಸತಿ ಗೃಹಗಳ ಕುರಿತು.

**ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೬೧ (೨೪೭) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯಪುರ ಮತ್ತು ಬಾಗಲಕೋಟೆ ಅವಳಿ ಜಿಲ್ಲೆಯಲ್ಲಿರುವ ಒಟ್ಟು ಸರ್ಕಾರಿ ವಸತಿ ಗೃಹಗಳು ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಅವಳಿ ಜಿಲ್ಲೆಗಳಲ್ಲಿರುವ ಸರ್ಕಾರಿ ವಸತಿ ಗೃಹದಲ್ಲಿ ವಾಸಿಸಲು ಸುಸ್ಥಿತಿಯಲ್ಲಿರುವ ವಸತಿ ಗೃಹಗಳು ಎಷ್ಟು ; ದುರಸ್ಥಿಯಲ್ಲಿರುವ ವಸತಿ ಗೃಹಗಳೆಷ್ಟು ; ವಾಸಕ್ಕೆ ಯೋಗ್ಯವಲ್ಲದ ವಸತಿ ಗೃಹಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಅವಳಿ ಜಿಲ್ಲೆಗಳಲ್ಲಿ ಹೊಸದಾಗಿ ಸರ್ಕಾರಿ ವಸತಿ ಗೃಹಗಳ ನಿರ್ಮಾಣದ ಕಾರ್ಯ ನಡೆಯುತ್ತಿದೆಯೇ ; ನಡೆಯುತ್ತಿದ್ದರೆ, ಯಾವ ಯಾವ ತಾಲ್ಲೂಕುಗಳಲ್ಲಿ ಎಷ್ಟೆಷ್ಟು ಸರ್ಕಾರಿ ವಸತಿ ಗೃಹಗಳ ನಿರ್ಮಾಣ ಕಾರ್ಯ ನಡೆಯುತ್ತಿದೆ ? (ವಿವರ ನೀಡುವುದು)



## ರಸ್ತೆಗಳ ಅಭಿವೃದ್ಧಿ ಕಾಮಗಾರಿ ಬಗ್ಗೆ.

**ಶ್ರೀ ಟಿ.ಜಾನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೬೨ (೨೫೨) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯಲ್ಲಿ ಮುಖ್ಯಮಂತ್ರಿಗಳ ವಿಶೇಷ ಪ್ಯಾಕೇಜ್‌ನಡಿಯಲ್ಲಿ ಲೋಕೋಪಯೋಗಿ ಇಲಾಖಾ ವತಿಯಿಂದ ಅಭಿವೃದ್ಧಿಪಡಿಸಲಾದ ರಸ್ತೆಗಳು ಯಾವುವು ;

(ಆ) ಸದರಿ ರಸ್ತೆಗಳ ಅಭಿವೃದ್ಧಿ ಕಾಮಗಾರಿಯು ಯಾವ ಹಂತದಲ್ಲಿದೆ ; (ತಾಲ್ಲೂಕುವಾರು ಮತ್ತು ರಸ್ತೆವಾರು ಮಾಹಿತಿ ನೀಡುವುದು)

(ಇ) ಸದರಿ ರಸ್ತೆಗಳ ಅಭಿವೃದ್ಧಿಗೆ ತಗುಲಿರುವ ಒಟ್ಟು ವೆಚ್ಚ ಎಷ್ಟು ? (ರಸ್ತೆವಾರು ಮಾಹಿತಿ ನೀಡುವುದು)

## ರಾಯಚೂರು ನಗರದಲ್ಲಿ ಕುಡಿಯುವ ನೀರಿನ ಶುದ್ಧೀಕರಣ ಬಗ್ಗೆ.

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೧೬೩ (೨೫೬) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ನಗರ ಹಾಗೂ ಮಾನ್ವಿ ಪಟ್ಟಣದಲ್ಲಿ ಕುಡಿಯುವ ನೀರಿನ ಶುದ್ಧೀಕರಣವಾಗದೆ ನೀರು ಸರಬರಾಜು ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ರಾಯಚೂರು ಮತ್ತು ಮಾನ್ವಿ ಪಟ್ಟಣದಲ್ಲಿ ಶುದ್ಧ ಕುಡಿಯುವ ನೀರು ಸರಬರಾಜು ಮಾಡಲು ತೆಗೆದುಕೊಂಡ ಕ್ರಮಗಳೇನು ;

(ಇ) ನಗರೋತ್ಥಾನ ಅಡಿಯಲ್ಲಿ ಮಂಜೂರಾತಿಯಾಗಿರುವ ಕಾಮಗಾರಿಗಳನ್ನು ಕೈಗೊತ್ತಿಕೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ತ್ವರಿತಗತಿಯಲ್ಲಿ ಈ ನಗರೋತ್ಥಾನ ಯೋಜನೆಯಡಿಯಲ್ಲಿ ಕಾಮಗಾರಿಯನ್ನು ಪೂರೈಸಲು ಹಾಗೂ ಕಾಮಗಾರಿಯ ಗುಣಮಟ್ಟ ಕಾಪಾಡಲು ಸರ್ಕಾರ ತೆಗೆದುಕೊಂಡ ಕ್ರಮವೇನು ;

(ಉ) ೨೦೧೩-೨೦೧೪ರಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ರಾಯಚೂರು ಜಿಲ್ಲೆಯಲ್ಲಿ ಯಾವ ಯಾವ ಯೋಜನೆಗಳನ್ನು ಕಾರ್ಯರೂಪಕ್ಕೆ ತರಲಾಗಿದೆ ;

(ಊ) ಈ ಯೋಜನೆಗಳಿಂದ ಎಷ್ಟು ಜನರಿಗೆ ಅನುಕೂಲವಾಗಿದೆ ; ಇದರ ಅಂದಾಜು ಮೊತ್ತವೆಷ್ಟು ?

## ರಾಯಚೂರಿನಿಂದ ಕಲ್ಮಲಾನ ಕ್ರಾಸ್‌ವರೆಗೆ ಚತುಷ್ಪಥ ರಸ್ತೆ ನಿರ್ಮಾಣ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೧೬೪ (೨೫೫) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರಿನಿಂದ ಕಲ್ಮಲಾ ಕ್ರಾಸ್‌ವರೆವಿಗೂ ಎಸ್.ಹೆಚ್–೨೦ ಚತುಷ್ಪಥ ರಸ್ತೆ ನಿರ್ಮಾಣ ಮಾಡಲು ಎಸ್.ಹೆಚ್.ಡಿ.ಪಿ. ಯೋಜನೆ ಮುಖಾಂತರ ಮಂಜೂರಾತಿ ನೀಡಿದೆಯೇ ;

(ಆ) ಇಲ್ಲದಿದ್ದರೆ ಯಾವಾಗ ಮಂಜೂರಾತಿ ನೀಡಲಾಗುವುದು ;



(ಇ) ಮಂತ್ರಲಾಯ ಸೇತುವೆಯಿಂದ ಕೃಷ್ಣಾ ಸೇತುವೆವರೆಗೂ ಹೋಗುವ ರಾಷ್ಟ್ರೀಯ ಹೆದ್ದಾರಿ ಎನ್.ಹೆಚ್–೧೬೭ ಅಭಿವೃದ್ಧಿಪಡಿಸಲು ಸರಕಾರ ತೆಗೆದುಕೊಂಡ ಕ್ರಮವೇನು ;

(ಈ) ಎನ್.ಹೆಚ್–೧೬೭ ಯೋಜನೆ ಅಡಿಯಲ್ಲಿ ರಿಂಗ್ ರೋಡ್ ನಿರ್ಮಾಣ ಮಾಡಲು ಹಾಗೂ ನೂತನ ಕೃಷ್ಣಾ ಸೇತುವೆ ನಿರ್ಮಾಣ ಮಾಡಲು ತೆಗೆದುಕೊಂಡ ಕ್ರಮಗಳೇನು ;

(ಉ) ರಾಷ್ಟ್ರೀಯ ಹೆದ್ದಾರಿ ಎನ್.ಹೆಚ್.–೧೬೭ರಲ್ಲಿ ಬರುವ ರಾಯಚೂರು ನಗರದಲ್ಲಿ ೨.೮ ಕಿ.ಮಿ. ಕಾಂಕ್ರೀಟ್ ರಸ್ತೆ ನಿರ್ಮಾಣ ಮಾಡಲು ಮಂಜೂರಾತಿ ಆಗಿರುವುದೇ, ಹಾಗಿದ್ದಲ್ಲಿ, ಮಂಜೂರಾತಿ ಆಗಿರುವ ಕಾಮಗಾರಿ ಪ್ರಾರಂಭಿಸಲು ತೆಗೆದುಕೊಂಡಿರುವ ಕ್ರಮವೇನು ?

## ರಾಯಚೂರು ನಗರದಲ್ಲಿರುವ APMCನ ಕಾಟನ್ ಮಾರ್ಕೆಟ್‌ಗಳ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೧೬೫ (೨೫೩) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ನಗರದಲ್ಲಿರುವ APMC ಮಾರುಕಟ್ಟೆಯಲ್ಲಿರುವ ಹತ್ತಿ (ಕಾಟನ್) ಅಂಗಡಿಗಳೆಷ್ಟು ;

(ಆ) ೨೦೧೨ ರಿಂದ ೨೦೧೫ ರವರೆಗೆ ಸದರಿ ಮಾರುಕಟ್ಟೆಯಲ್ಲಿ ನಡೆದಿರುವ ಹತ್ತಿಯ ವಹಿವಾಟು ಎಷ್ಟು ;

(ಇ) ಸದರಿ ಮಾರುಕಟ್ಟೆಯನ್ನು ರೈತರ ಅನುಕೂಲಕ್ಕಾಗಿ ಅಭಿವೃದ್ಧಿಪಡಿಸುವ ಯೋಜನೆ ಸರ್ಕಾರದ ಮುಂದಿದೆಯೇ ;

(ಈ) ಸದರಿ ಮಾರುಕಟ್ಟೆ ಮಳಿಗೆಯಲ್ಲಿ ರಸ್ತೆಗಳು, ಕುಡಿಯುವ ನೀರು ಮತ್ತು ಶೌಚಾಲಯಗಳು ಹಾಗೂ ಇತರೆ ಮೂಲಭೂತ ಸೌಲಭ್ಯಗಳು ಇಲ್ಲದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದನ್ನು ಸರಿಪಡಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?

## ರಾಯಚೂರು ಜಿಲ್ಲೆಯಲ್ಲಿರುವ ಸಹಕಾರ ಸಂಘಗಳ ಬಗ್ಗೆ.

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೧೬೬ (೨೫೪) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯಲ್ಲಿ ಇರುವ ಒಟ್ಟು ಸಹಕಾರ ಸಂಘಗಳೆಷ್ಟು ;

(ಆ) ಎಷ್ಟು ಸಹಕಾರ ಸಂಘಗಳು ವಹಿವಾಟು ನಡುಸುತ್ತಿವೆ ;

(ಇ) ಜಿಲ್ಲೆಯಲ್ಲಿ ೨೦೧೪ ರಿಂದ ೨೦೧೫ರ ವರೆಗೆ ರೈತರಿಗೆ ಕೊಟ್ಟಿರುವ ಸಾಲವೆಷ್ಟು ; ಸಾಲ ಪಡೆದ ರೈತರ ಸಂಖ್ಯೆ ಎಷ್ಟು ; ಸಾಲದ ಮೊತ್ತವೆಷ್ಟು ;

(ಈ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳ ರೈತರು ಸಹಕಾರ ಸಂಘಗಳಲ್ಲಿ ಸದಸ್ಯತ್ವ ಪಡೆಯಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳು ಯಾವುವು ?

## ಸಾರ್ವಜನಿಕ ಉದ್ದಿಮೆಗಳಲ್ಲಿ ಅನುಕಂಪ ಆಧಾರದ ನೇಮಕಾತಿ

**ಶ್ರೀ ಆರ್.ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೧೬೭ (೨೬೨) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಾರ್ವಜನಿಕ ಉದ್ದಿಮೆಗಳಲ್ಲಿ ಅನುಕಂಪದ ಆಧಾರದ ಮೇಲೆ ಮಾಡಿಕೊಳ್ಳುವ ನೇಮಕಾತಿಯನ್ನು ನಿಲ್ಲಿಸಲು ಕಾರಣಗಳೇನು ; ಯಾವಾಗಿನಿಂದ ನಿಲ್ಲಿಸಲಾಗಿದೆ (ವಿವರವಾದ ಮಾಹಿತಿ ನೀಡುವುದು)



(ಆ) ಇದರಿಂದ ಮೃತ ಉದ್ಯೋಗಿಯ ಕುಟುಂಬಕ್ಕೆ ಅನ್ಯಾಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅವರಿಗೆ ಯಾವಾಗ ನ್ಯಾಯ ಒದಗಿಸಲಾಗುವುದು;

(ಇ) ೩೦ ಮಾರ್ಚ್ ೨೦೧೫ಕ್ಕೆ ಸಾರ್ವಜನಿಕ ಉದ್ದಿಮೆಗಳಲ್ಲಿ ಅನುಕಂಪದ ಆಧಾರದ ಮೇಲೆ ಕೆಲಸ ಕೋರಿ ಬಂದ ಅರ್ಜಿಗಳು ಹಾಗೂ ಬಾಕಿ ಇರುವ ಅರ್ಜಿಗಳ ಸಂಖ್ಯೆ ಎಷ್ಟು? (ವಿವರವಾಗಿ ಅರ್ಜಿದಾರರ ಹೆಸರು, ವಿಳಾಸ, ಒಳಗೊಂಡಂತೆ ವಿವರವಾದ ಮಾಹಿತಿ ನೀಡುವುದು)

## ಸಕ್ಕರೆ ಕಾರ್ಖಾನೆಗಳ ಕಾರ್ಯನಿರ್ವಹಣೆ ಬಗ್ಗೆ

**ಶ್ರೀ ಆರ್.ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೧೬೮ (೨೬೦) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಇರುವ ಒಟ್ಟು ಸಕ್ಕರೆ ಕಾರ್ಖಾನೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ಕೊಡುವುದು)

(ಆ) ಸರ್ಕಾರಿ, ಅರೆಸರ್ಕಾರಿ, ಸಹಕಾರಿ ಹಾಗೂ ಖಾಸಗಿ ಸಕ್ಕರೆ ಕಾರ್ಖಾನೆಗಳು ಯಾವುವು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಕಳೆದ ೩ ವರ್ಷಗಳಲ್ಲಿ ಸದರಿ ಸಕ್ಕರೆ ಕಾರ್ಖಾನೆಗಳಿಗೆ ರಾಜ್ಯ ಸರ್ಕಾರ ಮತ್ತು ಕೇಂದ್ರ ಸರ್ಕಾರ ನೀಡಿದ ಸಾಲ, ಸಹಾಯಧನ, ಎಷ್ಟು ; (ವಿವರವಾದ ಮಾಹಿತಿ ನೀಡುವುದು)

(ಈ) ಸದರಿ ಸಕ್ಕರೆ ಕಾರ್ಖಾನೆಗಳು ರೈತರಿಗೆ ನೀಡಬೇಕಾದ ಬಾಕಿ ಹಣ ಎಷ್ಟು ?

## ರಾಜ್ಯದ ಪಿ.ಎಲ್.ಡಿ / ಕಾಸ್‌ಕಾರ್ಡ್ ಬ್ಯಾಂಕಿನ ಕಾರ್ಯವೈಖರಿ ಬಗ್ಗೆ.

**ಶ್ರೀ ಆರ್.ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೧೬೯ (೨೫೯) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಇರುವ ಪಿ.ಎಲ್.ಡಿ. ಬ್ಯಾಂಕ್‌ನ್ನು ಯಾವ ಉದ್ದೇಶಕ್ಕಾಗಿ ಮತ್ತು ಯಾವಾಗ ಸ್ಥಾಪನೆ ಮಾಡಲಾಯಿತು; ಕೇಂದ್ರ ಕಛೇರಿ ಎಲ್ಲಿದೆ; ಎಷ್ಟು ಶಾಖೆಗಳು ಇವೆ; ರಾಜ್ಯದಲ್ಲಿ ಸದರಿ ಬ್ಯಾಂಕ್‌ನ ಒಟ್ಟು ಎಷ್ಟು ಶಾಖೆಗಳು ಇವೆ; (ವಿಳಾಸವಾರು ಮಾಹಿತಿ ನೀಡುವುದು)

(ಆ) ಪಿ.ಎಲ್.ಡಿ. ಬ್ಯಾಂಕ್‌ನ ಸಿ & ಆರ್ ಪ್ರಕಾರ ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು; (ಹುದ್ದೆಯ ಪದನಾಮ, ವೇತನ ಶ್ರೇಣಿ, ಖಾಲಿ ಇರುವ ಹುದ್ದೆಗಳ ವಿವರವಾದ ಮಾಹಿತಿ ನೀಡುವುದು)

(ಇ) ಕಾಸ್‌ಕಾರ್ಡ್ ಬ್ಯಾಂಕ್‌ನ್ನು ಯಾವಾಗ ಸ್ಥಾಪಿಸಲಾಯಿತು; ಅದರ ಉದ್ದೇಶ ಮತ್ತು ಗುರಿಗಳು ಏನು;

(ಈ) ನಬಾರ್ಡ್‌ನವರು ನೇರವಾಗಿ ಪಿ.ಎಲ್.ಡಿ. ಬ್ಯಾಂಕುಗಳಿಗೆ ಏತಕ್ಕಾಗಿ ಸಾಲ ನೀಡುತ್ತಿಲ್ಲ; ಈ ರೀತಿ ಸಾಲ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ತೆಗೆದುಕೊಂಡಿರುವ ಕ್ರಮವೇನು?



## ಸಾರ್ವಜನಿಕ ಉದ್ದಿಮೆಗಳಲ್ಲಿ ಖಾಲಿ ಹುದ್ದೆಗಳ ನೇಮಕಾತಿ

**ಶ್ರೀ ಆರ್.ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೧೭೦ (೨೬೧) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಾರ್ವಜನಿಕ ಉದ್ದಿಮೆಗಳಲ್ಲಿ ದಿನಾಂಕ:೧೦–೧೦–೨೦೦೦ ದಿಂದ ಇಲ್ಲಿಯವರೆಗೆ ಎಷ್ಟು ಉದ್ಯೋಗಿಗಳನ್ನು ನೇರ ನೇಮಕಾತಿ ಮೂಲಕ ನೇಮಕ ಮಾಡಲಾಗಿದೆಯೇ ;

(ಆ) ಮಾಡಿದ್ದರೆ, ಎಷ್ಟು ಹುದ್ದೆಗಳಿಗೆ ನೇಮಕ ಮಾಡಲಾಗಿದೆ (ಹುದ್ದೆವಾರು, ವರ್ಷವಾರು, ವಿವರವಾರು ಮಾಹಿತಿ ನೀಡುವುದು)

(ಇ) ನೇರ ನೇಮಕಾತಿ ಹಾಗೂ ಅನುಕಂಪದ ಆಧಾರದ ನೇಮಕಾತಿಗೂ ಇರುವ ವ್ಯತ್ಯಾಸವೇನು ;

(ಈ) ಅನುಕಂಪದ ಆಧಾರದ ನೇಮಕಾತಿಗೆ ಹೊರಡಿಸಿದ ಸುತ್ತೋಲೆ ನಿಯಮವು ನೇರ ನೇಮಕಾತಿಗೆ ಅನ್ವಯಿಸುವುದಿಲ್ಲವೇ ಕಾರಣವೇನು ?

## ದಾವಣಗೆರೆ ನಗರಾಭಿವೃದ್ಧಿ ಪ್ರಾಧಿಕಾರ ಹಾಗೂ ಸ್ಥಳೀಯ ಸಂಸ್ಥೆಯಲ್ಲಿ ಖಾಲಿ ಇರುವ ಕಂಪ್ಯೂಟರ್ ಆಪರೇಟರ್

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೧೭೧ (೨೫೮) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಾವಣಗೆರೆ ಜಿಲ್ಲೆಯಲ್ಲಿ ಮಹಾನಗರಪಾಲಿಕೆ, ಪುರಸಭೆ ಹಾಗೂ ನಗರಸಭೆಗಳಲ್ಲಿ ಖಾಲಿ ಇರುವ ಕಂಪ್ಯೂಟರ್ ಆಪರೇಟರ್ ಹುದ್ದೆಗಳ ಸಂಖ್ಯೆ ಎಷ್ಟು ;

(ಆ) ಈ ಹುದ್ದೆಗಳು ಎಷ್ಟು ವರ್ಷದಿಂದ ಖಾಲಿ ಇವೆ ;

(ಇ) ಖಾಲಿ ಹುದ್ದೆಗಳನ್ನು ಭರ್ತಿ ಮಾಡದಿರುವುದರಿಂದ ಸ್ಥಳೀಯ ಸಂಸ್ಥೆಗಳ ಕಾರ್ಯನಿರ್ವಹಣೆಗೆ ತೊಂದರೆಯಾಗುತ್ತಿರುವುದು ನಿಜವೆ ;

(ಈ) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಯಾವುದಾದರೂ ಕಾಲಮಿತಿಯನ್ನು ಸರ್ಕಾರ ಹಾಕಿಕೊಂಡಿದೆಯೇ ;

(ಉ) ಹಾಕಿಕೊಂಡಿದ್ದಲ್ಲಿ, ಯಾವ ದಿನಾಂಕದೊಳಗೆ ಈ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲಾಗುವುದು ?

## ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ಕಾರ್ಯಕ್ರಮಗಳು

**ಶ್ರೀ ವೀರಕುಮಾರ ಅಪ್ಪಾಸೊ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೨ (೨೬೪) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೨ ವರ್ಷಗಳ ಅವಧಿಯಲ್ಲಿ ರಾಜ್ಯ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ಮೂಲತ ಬೆಳಗಾವಿ ಜಿಲ್ಲೆಗೆ ಜಾರಿಗೊಳಿಸಿದ ಯೋಜನೆಗಳಾವುವು ; ಸದರಿ ಯೋಜನೆಗಳ ಜಾರಿಗಾಗಿ ಮೀಸಲಿಟ್ಟ ಅನುದಾನದ ಮೊತ್ತ ಎಷ್ಟು ; ಆ ಪೈಕಿ ಖರ್ಚಾದ ಮೊತ್ತ ಎಷ್ಟು ; (ಯೋಜನಾವಾರು ಅನುದಾನದ ವಿವರ ನೀಡುವುದು)

(ಆ) ಅಲ್ಪಸಂಖ್ಯಾತರ ಸಮಗ್ರ ಅಭಿವೃದ್ಧಿಗಾಗಿ ನಿಗಮವು ನೂತನ ಯೋಜನೆಗಳ ಮೂಲಕ ಕಾರ್ಯ ಪ್ರವೃತ್ತರಾಗಲು ಸರ್ಕಾರದ ಕ್ರಿಯಾ ಯೋಜನೆಗಳೇನು ;



(ಇ) ನಿಗಮವು ಜಾರಿಗೊಳಿಸುವ ಯೋಜನೆಗಳು ಬಡ ಜನರನ್ನು ತಲುಪಲು ಸುಲಭ ಸಾಧನೆ ನಿಯಮಗಳನ್ನು ಒಳಗೊಳ್ಳುವಂತೆ ಮಾಡಲು ಸರ್ಕಾರ ಕ್ರಮ ಜರುಗಿಸುವುದೇ ?

## ರಾಜ್ಯದಲ್ಲಿ ಸೋಲಾರ್ ಪಾರ್ಕ್‌ಗಳ ಸ್ಥಾಪನೆ ಕುರಿತು

**ಶ್ರೀ ಮೃತ್ಯುಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೩ (೨೬೫) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸೋಲಾರ್ ಪಾರ್ಕ್‌ಗಳ ಸ್ಥಾಪನೆಗೆ ಸರ್ಕಾರ ಕ್ರಮ ಕೈಗೊಂಡಿರುವ ಕ್ರಮಗಳಾವುವು ; (ವಿವರ ನೀಡುವುದು)

(ಆ) "ಸೋಲಾರ್ ವಿದ್ಯುಚ್ಛಕ್ತಿ" ಉತ್ಪಾದಿಸಲು ಪ್ರೋತ್ಸಾಹ ನೀಡುವ ಸಲುವಾಗಿ ಸರ್ಕಾರ ಹಮ್ಮಿಕೊಂಡಿರುವ ಕಾರ್ಯಕ್ರಮಗಳಾವುವು ;

(ಇ) ಬೇರೆ ಬೇರೆ ರಾಜ್ಯಗಳಿಂದ ವಿದ್ಯುತ್ ಖರೀದಿಯ ಜೊತೆ "ಸೋಲಾರ್ ವಿದ್ಯುಚ್ಛಕ್ತಿ" ಯನ್ನು ಹೆಚ್ಚಿನ ಪ್ರಮಾಣದಲ್ಲಿ ಉತ್ಪಾದಿಸುವ ಮೂಲಕ ರಾಜ್ಯದ ಬೇಡಿಕೆಗೆ ಅನುಗುಣವಾಗಿ ವಿದ್ಯುತ್ ಪೂರೈಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಆರ್.ಜಿ.ಜಿ.ವಿ. ಯೋಜನೆ ಅನುಷ್ಠಾನಗೊಳಿಸುವ ಬಗ್ಗೆ

**ಶ್ರೀ ಮೃತ್ಯುಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೪ (೨೬೬) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಳ್ಳಾರಿ ಜಿಲ್ಲೆಯಲ್ಲಿ ಎಷ್ಟು ತಾಲ್ಲೂಕುಗಳಲ್ಲಿ ಆರ್.ಜಿ.ಜಿ.ವಿ. ಯೋಜನೆ ಅನುಷ್ಠಾನಗೊಳಿಸಲಾಗುತ್ತಿದೆ ; ಅವು ಯಾವುವು ;

(ಆ) ಈ ಯೋಜನೆಯ ಉದ್ದೇಶ ಏನು ;

(ಇ) ಈ ಯೋಜನೆಯಡಿ ಎಲ್ಲೆಲ್ಲಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ ; ಪ್ರಸ್ತುತ ಸದರಿ ಕಾಮಗಾರಿಗಳು ಯಾವ ಹಂತದಲ್ಲಿವೆ ; (ಕಾಮಗಾರಿವಾರು ವಿವರ ನೀಡುವುದು)

(ಈ) ಈ ಯೋಜನೆಯಿಂದ ಜಿಲ್ಲೆಯ ಎಷ್ಟು ಹಳ್ಳಿಗಳು ಪ್ರಯೋಜನ ಪಡೆಯುತ್ತವೆ ? (ತಾಲ್ಲೂಕುವಾರು ವಿವರ ನೀಡುವುದು)

## ಬೆಂಗಳೂರು ನಗರದಲ್ಲಿರುವ ಗೃಹ ನಿರ್ಮಾಣ ಸಹಕಾರ ಸಂಘಗಳ ಬಗ್ಗೆ

**ಶ್ರೀ ದಯಾನಂದ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೫ (೨೬೭) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿರುವ ಗೃಹ ನಿರ್ಮಾಣ ಸಹಕಾರ ಸಂಘಗಳ ಸಂಖ್ಯೆ ಎಷ್ಟು ; (ಸಂಘಗಳ ಹೆಸರು ಮತ್ತು ಪ್ರಾರಂಭಗೊಂಡ ವರ್ಷದ ವಿವರ ನೀಡುವುದು)

(ಆ) ಸದರಿ ಸಹಕಾರಿ ಸಂಘಗಳಲ್ಲಿರುವ ಒಟ್ಟು ಸದಸ್ಯರ ಸಂಖ್ಯೆ ಎಷ್ಟು ; ಆ ಪೈಕಿ ಸಂಘಗಳು ತನ್ನ ಸದಸ್ಯರಿಗೆ ನೀಡಿರುವ ನಿವೇಶನಗಳ ಸಂಖ್ಯೆ ಎಷ್ಟು ; ( ಸಹಕಾರ ಸಂಘಗಳವಾರು ವಿವರ ನೀಡುವುದು)

(ಇ) ಬೆಂಗಳೂರು ನಗರದಲ್ಲಿರುವ ಸೊಸೈಟಿಗಳು ತನ್ನ ಸದಸ್ಯರುಗಳಿಗೆ ನಿವೇಶನವನ್ನು ನೀಡುವುದರಲ್ಲಿ ವಂಚನೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ಪೂರ್ಣ ಮಾಹಿತಿ ನೀಡುವುದು)

(ಈ) ಈ ರೀತಿ ವಂಚನೆ ಮಾಡಿದ ಸಂಘಗಳ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?



## ರಾಜ್ಯದಲ್ಲಿ ವಿದ್ಯುತ್ ಬಳಕೆಯ ಬಗ್ಗೆ

**ಶ್ರೀ ದಯಾನಂದ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೬ (೨೬೯) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ದಿನಕ್ಕೆ ಒಟ್ಟು ಎಷ್ಟು ಮೆಗಾವ್ಯಾಟ್ ವಿದ್ಯುತ್ ಖರ್ಚಾಗುತ್ತಿದೆ ;

(ಆ) ಸಾರ್ವಜನಿಕ ಸ್ಥಳಗಳಲ್ಲಿರುವ ರಸ್ತೆಗಳಲ್ಲಿ ಅಳವಡಿಸಿರುವ ದೀಪಗಳಿಗೆ ಎಷ್ಟು ಮೆಗಾವ್ಯಾಟ್ ವಿದ್ಯುತ್ ಖರ್ಚಾಗುತ್ತಿದೆ ; (ವಿವರ ನೀಡುವುದು)

(ಇ) "ಎಲ್‌ಇಡಿ" ದೀಪಗಳನ್ನು ಉಪಯೋಗಿಸುವುದರಿಂದ ವಿದ್ಯುತ್ ಉಳಿತಾಯವಾಗಲಿದ್ದು, ರಾಜ್ಯದಲ್ಲಿ ಇದರ ಉಪಯೋಗ ಶೇಕಡವಾರು ಎಷ್ಟಿರುತ್ತದೆ ;

(ಈ) ರಾಜ್ಯದ ಎಲ್ಲಾ ಸ್ಥಳಗಳಲ್ಲಿ ಹಾಗೂ ಸರ್ಕಾರಿ ಕಛೇರಿಗಳಲ್ಲಿ ಎಲ್‌ಇಡಿ ದೀಪಗಳನ್ನು ಕಡ್ಡಾಯವಾಗಿ ಅಳವಡಿಸಿ ವಿದ್ಯುತ್‌ನ್ನು ಉಳಿತಾಯ ಮಾಡುವ ಬಗ್ಗೆ ಸರ್ಕಾರದ ಕ್ರಮಗಳೇನು ?

## ಕಬ್ಬನ್ ಪಾರ್ಕ್‌ನ್ ಅಭಿವೃದ್ಧಿಗಾಗಿ ಸರ್ಕಾರವು ಹಮ್ಮಿಕೊಂಡಿರುವ ಕಾರ್ಯಕ್ರಮದ ಬಗ್ಗೆ.

**ಶ್ರೀ ದಯಾನಂದ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೭ (೨೬೮) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರಿನಲ್ಲಿರುವ ಪ್ರತಿಷ್ಠಿತ ಕಬ್ಬನ್ ಪಾರ್ಕ್‌ನ್ ಒಟ್ಟು ವಿಸ್ತೀರ್ಣವೆಷ್ಟು ;

(ಆ) ಕಳೆದ ೦೫ ವರ್ಷಗಳಿಂದ ಈ ಉದ್ಯಾನವನದ ಅಭಿವೃದ್ಧಿಗಾಗಿ ವ್ಯಯ ಮಾಡಿದ ಒಟ್ಟು ಮೊತ್ತವೆಷ್ಟು ;

(ಇ) ತೋಟಗಾರಿಕೆ ಇಲಾಖೆಯಿಂದ ಈ ಉದ್ಯಾನವನದ ನಿರ್ವಹಣೆಯನ್ನು ಸಮರ್ಪಕವಾಗಿ ನಿರ್ವಹಿಸಲಾಗುತ್ತಿದೆಯೇ ;

(ಈ) ಕಬ್ಬನ್ ಪಾರ್ಕ್ ಸಂಬಂಧಪಟ್ಟಂತೆ ಅಭಿವೃದ್ಧಿ ಪ್ರಾಧಿಕಾರವನ್ನು ರಚಿಸಲು ಸರ್ಕಾರವು ಯೋಚಿಸಿದೆಯೆ; ಯೋಚಿಸಿದ್ದಲ್ಲಿ, ಪ್ರಾರಂಭ ಮಾಡಲಾಗುವುದು ಯಾವಾಗ ?

## ಬೆಂಗಳೂರು ನಗರಕ್ಕೆ ಬೇಕಾಗಿರುವ ವಿದ್ಯುತ್ ಪ್ರಮಾಣದ ಬಗ್ಗೆ

**ಶ್ರೀ ದಯಾನಂದ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೮ (೨೭೦) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರ ಜಿಲ್ಲೆಗೆ ಬೇಕಾಗಿರುವ ಒಟ್ಟು ವಿದ್ಯುತ್ ಪ್ರಮಾಣವೆಷ್ಟು ; ಈ ವಿದ್ಯುತ್‌ನ್ನು ಉತ್ಪಾದನೆ ಮಾಡಲು ಸರ್ಕಾರದ ವಿವಿಧ ಮಾರ್ಗಗಳೇನು ;

(ಆ) ಕಳೆದ ೦೫ ವರ್ಷಗಳಿಂದ ವಿದ್ಯುತ್ ಬಳಕೆಯ ವಿವರಗಳನ್ನು ನೀಡುವುದು; ಮತ್ತು ಯಾವ ಯಾವ ಚಟುವಟಿಕೆಗಳಿಗೆ ಯಾವ ಪ್ರಮಾಣದಲ್ಲಿ ವಿದ್ಯುತ್ ಬಳಸಲಾಗುತ್ತಿದೆ ;

(ಇ) ಗೃಹ ಬಳಕೆ ವಿದ್ಯುತ್ ಸಂಪರ್ಕವನ್ನು ಅಕ್ರಮವಾಗಿ ವಾಣಿಜ್ಯ ಉಪಯೋಗಕ್ಕಾಗಿ ಬಳಸುತ್ತಿರುವ ಎಷ್ಟು ಪ್ರಕರಣಗಳು ದಾಖಲಾಗಿದೆ ; ಅಕ್ರಮವಾಗಿ ವಿದ್ಯುತ್ ಬಳಸುತ್ತಿರುವವರ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?



## ಮಾವು ಮತ್ತು ಇತರೆ ಹಣ್ಣುಗಳಿಗೆ ರಾಸಾಯನಿಕ ಪದಾರ್ಥಗಳನ್ನು ಲೇಪಿಸುವ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರ ಕ್ಷೇತ್ರ) :–**

೧೭೯ (೨೭೫) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಾವು ಹಾಗೂ ಇತರೆ ಹಣ್ಣುಗಳಿಗೆ (ಕಲ್ಲಂಗಡಿ, ಬಾಳೆಹಣ್ಣು) ರಾಸಾಯನಿಕ ಪದಾರ್ಥಗಳನ್ನು ಲೇಪಿಸಿ ಮಾರಾಟ ಮಾಡುತ್ತಿರುವ ವಿಷಯವು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ರಾಸಾಯನಿಕ ಪದಾರ್ಥ ಬಳಸಿದ ಹಣ್ಣುಗಳ ಸೇವನೆಯಿಂದ ಜನರ ಆರೋಗ್ಯದ ಮೇಲೆ ದುಷ್ಪರಿಣಾಮ ಉಂಟು ಮಾಡುತ್ತಿರುವುದು ನಿಜವೇ ;

(ಇ) ಹಾಗಿದ್ದಲ್ಲಿ ಇದನ್ನು ತಡೆಗಟ್ಟಲು ಸರ್ಕಾರವು ಯಾವ ಯಾವ ಕ್ರಮಗಳನ್ನು ಕೈಗೊಂಡಿದೆ ;

(ಈ) ರಾಸಾಯನಿಕ ಮಿಶ್ರಣದಿಂದ ಹಣ್ಣಾಗಿಸುವ ಪ್ರಕ್ರಿಯೆಗಳನ್ನು ಯಾವ ಮಾನದಂಡದಲ್ಲಿ ಪತ್ತೆ ಹಚ್ಚಲಾಗುತ್ತದೆ ;

(ಉ) ಈ ನಿಟ್ಟಿನಲ್ಲಿ ಆಹಾರ ಕಲಬೆರಕೆ ನಿಷೇಧ ಕಾಯ್ದೆಯಡಿಯಲ್ಲಿ ಗುಣಮಟ್ಟ ನಿಯಂತ್ರಣ ಕಾಯ್ದಿರಿಸಲು ಸರ್ಕಾರ ಮುಂದಾಗುವುದೇ ? (ವಿವರವಾಗಿ ಮಾಹಿತಿ ನೀಡುವುದು)

## ಹೈದರಾಬಾದ್–ಕರ್ನಾಟಕ ಭಾಗದ ಜಿಲ್ಲೆಗಳಿಗೆ ಅಲ್ಪಸಂಖ್ಯಾತರ ನಿಗಮದಿಂದ ಮಂಜೂರಾದ ಅನುದಾನ

**ಶ್ರೀ ಅಮರನಾಥ ಪಾಟೀಲ್ (ಪದವೀಧರ ಕ್ಷೇತ್ರ) :–**

೧೮೦ (೨೭೪) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೈದರಾಬಾದ್–ಕರ್ನಾಟಕ ಭಾಗದ ಜಿಲ್ಲೆಗಳ ಅಭಿವೃದ್ಧಿಯ ದೃಷ್ಟಿಯಿಂದ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ಮತ್ತು ಇಲಾಖೆಯಿಂದ ನೀಡಲಿರುವ ನೇರ ಸಾಲ ಸೌಲಭ್ಯ ಮತ್ತು ಸಹಾಯಧನಕ್ಕೆ ಪ್ರತಿ ವರ್ಷ ನೀಡುವ ಅನುದಾನಕ್ಕಿಂತ ಹೆಚ್ಚುವರಿಯಾಗಿ ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ಇದ್ದಲ್ಲಿ, ೨೦೧೫–೧೬ನೇ ಸಾಲಿನಲ್ಲಿ ಬಿಡುಗಡೆಯಾಗಿರುವ ಮೊತ್ತ ಎಷ್ಟು ; ಹೆಚ್ಚುವರಿಯಾಗಿ ಬಿಡುಗಡೆಯಾದ ಮೊತ್ತ ಎಷ್ಟು ; (ಮಾಹಿತಿ ನೀಡುವುದು)

(ಇ) ಹೈದರಾಬಾದ್–ಕರ್ನಾಟಕ ಭಾಗದ ಜಿಲ್ಲೆಗಳಿಗೆ ೩ ವರ್ಷಗಳಿಂದ ನೇರ ಸಾಲ ಸೌಲಭ್ಯ ಮತ್ತು ಸಹಾಯಧನಕ್ಕೆ ಬಿಡುಗಡೆ ಮಾಡಿರುವ ಅನುದಾನವೆಷ್ಟು ? (ವರ್ಷವಾರು, ಕ್ಷೇತ್ರವಾರು, ಹಾಗೂ ಜಿಲ್ಲಾವಾರು ಮಾಹಿತಿ ನೀಡುವುದು)

## ಬೆಸ್ಕಾಂನಲ್ಲಿ ಖಾಲಿ ಹುದ್ದೆಗಳ ನೇಮಕಾತಿ

**ಶ್ರೀ ಅಮರನಾಥ ಪಾಟೀಲ್ (ಪದವೀಧರ ಕ್ಷೇತ್ರ) :–**

೧೮೧ (೨೭೧) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ (ಬೆಸ್ಕಾಂ)ಯಲ್ಲಿ ಖಾಲಿ ಇರುವ ಪ್ರಥಮ ದರ್ಜೆ ಸಹಾಯಕ ಹಾಗೂ ದ್ವಿತೀಯ



ದರ್ಜೆ ಸಹಾಯಕ ಹುದ್ದೆಗಳನ್ನು ಭರ್ತಿಮಾಡಿಕೊಳ್ಳಲು ಅಧಿಸೂಚನೆ ಹೊರಡಿಸಿ ನೇಮಕಾತಿ ಪ್ರಕ್ರಿಯೆ ಜಾರಿಯಲ್ಲಿರುವುದು ಸರ್ಕಾರದ ಗಮನಕ್ಕೆ ಇದೆಯೇ ;

(ಆ) ಬಂದಿದ್ದಲ್ಲಿ, ಸಂವಿಧಾನದ ೩೭೧ (ಜೆ) ಕಲಂ ಅನ್ವಯ ಹೈದರಾಬಾದ್ ಕರ್ನಾಟಕ ಭಾಗಕ್ಕೆ ಈ ನೇಮಕಾತಿಯಲ್ಲಿ ಮೀಸಲಾತಿ ಕಲ್ಪಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದರೆ, ಇದನ್ನು ಸರಿಪಡಿಸುವ ನಿಟ್ಟಿನಲ್ಲಿ ಸರ್ಕಾರವು ಯಾವ ಕ್ರಮ ಕೈಗೊಂಡಿದೆ; ಯಾವ ಕಾಲಮಿತಿಯೊಳಗೆ ಇದನ್ನು ಸರಿಪಡಿಸಲಾಗುವುದು ? (ಮಾಹಿತಿ ನೀಡುವುದು)

## ಕಲಬುರಗಿ ತಾಲ್ಲೂಕಿನಲ್ಲಿ "ಶಾಖೋತ್ಪನ್ನ ವಿದ್ಯುತ್ ಸ್ಥಾವರ"ದ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರ ಕ್ಷೇತ್ರ) :–**

೧೮೨ (೨೭೩) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ತಾಲ್ಲೂಕಿನ ನದಿಶಿನ್ನೂರ, ಪೀರೋಜಾಬಾದ ಹಾಗೂ ಕಿರಣಗಿ ಗ್ರಾಮಗಳ ವ್ಯಾಪ್ತಿಯಲ್ಲಿ ಉದ್ದೇಶಿತ "ಶಾಖೋತ್ಪನ್ನ ವಿದ್ಯುತ್ ಸ್ಥಾವರ" ಯೋಜನೆಯನ್ನು ಕೈಬಿಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ಇಲ್ಲವಾದಲ್ಲಿ, ಸದರಿ ಗ್ರಾಮಗಳಲ್ಲಿನ ಫಲವತ್ತಾದ ರೈತರ ಸಾವಿರಾರು ಎಕರೆ ಜಮೀನನ್ನು ಭೂಸ್ವಾಧೀನಪಡಿಸಿಕೊಂಡು ಐದು ವರ್ಷ ಕಳೆದರೂ ಉದ್ದೇಶಿತ ಯೋಜನೆಯ ಯಾವುದೇ ಚಟುವಟಿಕೆಗಳು ನಡೆಯದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಸದರಿ ಉದ್ದೇಶಕ್ಕೆ ಭೂಸ್ವಾಧೀನ ಪಡಿಸಿಕೊಳ್ಳಲಾದ ಜಮೀನಿನ ಸಂಪೂರ್ಣ ವಿವರವನ್ನು ಗ್ರಾಮವಾರು, ಎಕರೆವಾರು ಹಾಗೂ ಹಂಚಿಕೆಯಾದ / ಹಂಚಿಕೆಯಾಗದ ಪರಿಹಾರ ಧನ ವಿವರ ನೀಡುವುದು ;

(ಇ) ಸದರಿ "ಶಾಖೋತ್ಪನ್ನ ವಿದ್ಯುತ್ ಸ್ಥಾವರ" ಯೋಜನೆಯ ಪೂರ್ಣ ವಿವರವುಳ್ಳ ಸಮಗ್ರ ಮಾಹಿತಿ ನೀಡುವುದು;

(ಈ) ಸದರಿ ಯೋಜನೆಯ ಅನುಷ್ಠಾನದ ವಿಳಂಬಕ್ಕೆ ಕಾರಣಗಳೇನು; ಈ ಯೋಜನೆಯನ್ನು ಕಾಲಮಿತಿಯೊಳಗೆ ಅನುಷ್ಠಾನಗೊಳಿಸಲು ಸರ್ಕಾರದ ಮುಂದಿರುವ ಕ್ರಮಗಳೇನು ? (ವಿವರ ನೀಡುವುದು)

## ಎಂ.ಎಸ್.ಐ.ಎಲ್ ನಲ್ಲಿ ನಡೆದ ಅವ್ಯವಹಾರದ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರ ಕ್ಷೇತ್ರ) :–**

೧೮೩ (೨೭೨) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೫ ವರ್ಷಗಳಲ್ಲಿ ಮೈಸೂರ್ ಸೇಲ್ಸ್ ಇಂಟರ್‌ನ್ಯಾಷನಲ್ ಲಿಮಿಟೆಡ್‌ನಲ್ಲಿ ಬೆಳಕಿಗೆ ಬಂದ ಅವ್ಯವಹಾರ, ಕರ್ತವ್ಯಲೋಪ ಹಾಗೂ ಭ್ರಷ್ಟಾಚಾರ ಪ್ರಕರಣಗಳ ಸಂಖ್ಯೆ ಎಷ್ಟು ; (ಪ್ರಕರಣವಾರು ಹೆಸರು ಹಾಗೂ ಹುದ್ದೆ ಸಹಿತ ಮಾಹಿತಿ ನೀಡುವುದು)

(ಆ) ಈ ಪ್ರಕರಣಗಳಿಂದ ರಾಜ್ಯಕ್ಕೆ ಎಷ್ಟು ಪ್ರಮಾಣದ ನಷ್ಟ ಉಂಟಾಗಿದೆ; ಇದಕ್ಕೆ ಕಾರಣಗಳೇನು; ಈ ನಿಟ್ಟಿನಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)



(ಇ) ಬೆಂಗಳೂರು ಹೆಚ್.ಎ.ಎಲ್ ವಿಮಾನ ನಿಲ್ದಾಣ ಹತ್ತಿರವಿರುವ ವಾಯು ಸರಕು ಸಂಕೀರ್ಣದಲ್ಲಿರುವ ಕಾರ್ಗೋ ಟರ್ಮಿನಲ್‌ನ್ನು ಖಾಸಗಿ ಕಂಪನಿಗೆ ಗುತ್ತಿಗೆ ನೀಡಲಾಗಿದೆಯೇ ? (ಗುತ್ತಿಗೆ ವಿವರ, ಅನುಮೋದನೆ ಮಾಡಿ ಸಭೆಗಳ ವಿವರ ನೀಡುವುದು)

## ಮಳೆಯಾಧರಿತ ಕೃಷಿ ಪದ್ಧತಿ ಕುರಿತು

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೧೮೪ (೨೭೭) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮಳೆಯಾಧಾರಿತ ಕೃಷಿಯನ್ನು ಅಳವಡಿಸಿಕೊಂಡಿರುವ ರೈತರ ಸಂಖ್ಯೆ ಎಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು, ವಿವರ ನೀಡುವುದು)

(ಆ) ಇದು ರಾಜ್ಯದ ಒಟ್ಟು ರೈತರ ಪ್ರಮಾಣದ ಶೇಕಡವಾರು ಪ್ರಮಾಣ ಎಷ್ಟು ;

(ಇ) ಈ ರೈತರು ಪ್ರಯೋಜನಕ್ಕೆ ಕೃಷಿ ಇಲಾಖೆ ತಂದಿರುವ ಒಣ ಬೇಸಾಯ ಪದ್ಧತಿಗಳು ಯಾವುವು ; (ವಿವರ ನೀಡುವುದು)

(ಈ) ಒಣ ಬೇಸಾಯ ಮಾಡುವ ರೈತರ ಹಿತ ಕಾಪಾಡುವುದಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ರಾಜ್ಯದಲ್ಲಿ ವಿದ್ಯುತ್ ಸಮಸ್ಯೆ ಬಗ್ಗೆ

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೧೮೫ (೨೭೮) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯಕ್ಕೆ ವರ್ಷಕ್ಕೆ ಬೇಕಾಗಿರುವ ವಿದ್ಯುಚ್ಛಕ್ತಿ ಎಷ್ಟು; ಪ್ರತಿ ದಿನ ಬೇಕಾಗಿರುವ ವಿದ್ಯುಚ್ಛಕ್ತಿ ಎಷ್ಟು ;

(ಆ) ವಿದ್ಯುಚ್ಛಕ್ತಿಯನ್ನು ಯಾವ–ಯಾವ ಮೂಲಗಳಿಂದ ಸಂಗ್ರಹಿಸಲಾಗುತ್ತಿದೆ ; ಇದಕ್ಕೆ ನೀಡುತ್ತಿರುವ ದರವೆಷ್ಟು ;

(ಇ) ರೈತರು ವಿದ್ಯುಚ್ಛಕ್ತಿ ಸಮಸ್ಯೆಯನ್ನು ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ರಾಜ್ಯದ ಎಷ್ಟು ಗ್ರಾಮಗಳಿಗೆ ವಿದ್ಯುತ್ ಸಂಪರ್ಕವಿಲ್ಲ; ಇಲ್ಲದಿದ್ದಲ್ಲಿ, ವಿದ್ಯುತ್ ಸಂಪರ್ಕ ಕಲ್ಪಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ; ಹೊರ ರಾಜ್ಯಗಳಿಂದ ಪಡೆದ ವಿದ್ಯುತ್ ಪ್ರಮಾಣವೆಷ್ಟು ?

## ಸ್ವಂತ ವೇತನ ಶ್ರೇಣಿ ಕುರಿತು

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೧೮೬ (೨೮೦) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಮುಖ್ಯಾಧಿಕಾರಿಗಳಾಗಿ ಸ್ವಂತ ವೇತನ ಶ್ರೇಣಿಯಲ್ಲಿ ಕಾರ್ಯನಿರ್ವಹಿಸಲು ಅನುಸರಿಸುತ್ತಿರುವ ಮಾನದಂಡಗಳೇನು ;

(ಆ) ಜೇಷ್ಠತೆಯಲ್ಲಿ ಹಿರಿಯರಾದ ನೌಕರರಿಗೆ/ಮುಂಬಡ್ತಿಗೆ ಅರ್ಹರಾದ ನೌಕರರಿಗೆ ಸ್ವಂತ ವೇತನ ಶ್ರೇಣಿಯಲ್ಲಿ ಮುಖ್ಯಾಧಿಕಾರಿಗಳಾಗಿ ಕಾರ್ಯನಿರ್ವಹಿಸಲು ಆದೇಶ ಹೊರಡಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಇ) ನೌಕರರ ಕೆ.ಸಿ.ಎಸ್.ಆರ್ ನಿಯಮ ೩೨ರ ಅಡಿಯಲ್ಲಿ ಜೇಷ್ಠತೆಯಲ್ಲಿ ಹಿರಿಯರಾದ ಹಾಗೂ ಮುಂಬಡ್ತಿಗೆ ಅರ್ಹರಾದ ನೌಕರರನ್ನು ಉನ್ನತ ಹುದ್ದೆಗೆ ನೇಮಿಸುವ ಬಗ್ಗೆ ಸರ್ಕಾರ ಕ್ರಮ ಕೈಗೊಳ್ಳುವುದೇ ;



(ಈ) ಹಾಗಿದ್ದಲ್ಲಿ, ಎಷ್ಟು ದಿನಗಳಲ್ಲಿ ಈ ಬಗ್ಗೆ ಕ್ರಮ ವಹಿಸಲಾಗುವುದು ? (ವಿವರ ನೀಡುವುದು)

## ಸಹಕಾರಿ ಸಂಘಗಳ ಕುರಿತು

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೧೮೭ (೨೭೯) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋಲಾರ–ಚಿಕ್ಕಬಳ್ಳಾಪುರ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲೆಗಳ ವ್ಯಾಪ್ತಿಯಲ್ಲಿರುವ ಪ್ರಾಥಮಿಕ ಸಹಕಾರಿ ಸಂಘಗಳು ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಇವುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಹಕಾರಿ ಸಂಘಗಳು ಎಷ್ಟು ;

(ಇ) ಈ ಸಹಕಾರಿ ಸಂಘಗಳಲ್ಲಿ ಎಷ್ಟು ಸಂಘಗಳು ಲಾಭದಾಯಕವಾಗಿ ವ್ಯವಹರಿಸುತ್ತಿವೆ ಹಾಗೂ ಎಷ್ಟು ಸಂಘಗಳು ನಷ್ಟದಲ್ಲಿ ನಡೆಯುತ್ತಿರುತ್ತವೆ ? (ತಾಲ್ಲೂಕುವಾರು ವಿವರ ನೀಡುವುದು)

## ಕೃಷಿ ಬೆಲೆ ಆಯೋಗದ ಸಂರಚನೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೮ (೨೮೨) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ "ಕೃಷಿ ಬೆಲೆ ಆಯೋಗ" ಅಸ್ತಿತ್ವದಲ್ಲಿದೆಯೇ ;

(ಆ) ಕೃಷಿ ಬೆಲೆ ಆಯೋಗದ ಸಂರಚನೆಯ ಮತ್ತು ಆಯೋಗದ ಕರ್ತವ್ಯವೇನು ; (ಸಂಪೂರ್ಣ ವಿವರ ನೀಡುವುದು)

(ಇ) ರಾಜ್ಯ ಕೃಷಿ ಬೆಲೆ ಆಯೋಗ ಕಳೆದ ಒಂದು ವರ್ಷದ ಅವಧಿಯಲ್ಲಿ ಎಷ್ಟು ಸಭೆಯನ್ನು ಕರೆಯಲಾಗಿದೆ; ಸದರಿ ಸಭೆಗಳಲ್ಲಿ ಎಷ್ಟು ನಿರ್ಣಯಗಳನ್ನು ಕೈಗೊಳ್ಳಲಾಗಿದೆ; ರೈತರಿಗೆ ಪ್ರಯೋಜನವಾಗುವ ಪ್ರಮುಖ ನಿರ್ಣಯಗಳೇನು ; (ಸಂಪೂರ್ಣ ವಿವರ ನೀಡುವುದು)

(ಈ) ರೈತರ ಹಿತದೃಷ್ಟಿಯಿಂದ ಕೃಷಿ ಬೆಲೆ ಆಯೋಗದ ಮುಂದಿರುವ ಪ್ರಸ್ತಾವನೆ, ಯೋಜನೆಗಳು ಯಾವುವು ? (ಸಂಪೂರ್ಣ ವಿವರ ನೀಡುವುದು)

## ಪೌರಾಡಳಿತ ಇಲಾಖೆಯ ಸುತ್ತೋಲೆಗಳ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೯ (೨೮೪) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಪೌರಾಡಳಿತ ಸ್ಥಳೀಯ ಸಂಸ್ಥೆಗಳಿಗೆ ಅನ್ವಯವಾಗುವಂತೆ ಸರ್ಕಾರದಿಂದ ಹೊರಡಿಸಿರುವ ಸುತ್ತೋಲೆ, ಆದೇಶ, ಮಾರ್ಗಸೂಚಿಗಳ ಸಂಖ್ಯೆ ಎಷ್ಟು ; (ಪ್ರತಿ ಒದಗಿಸುವುದು)

(ಆ) ಸದರಿ ಎಲ್ಲಾ ಆದೇಶಗಳು/ಸುತ್ತೋಲೆಗಳು ಇಂದಿಗೂ ಅನ್ವಯವಾಗುವುದೇ ;

(ಇ) ರಾಜ್ಯ ಪೌರಾಡಳಿತ ಸ್ಥಳೀಯ ಸಂಸ್ಥೆಗಳ ವಿವಿಧ ಯೋಜನೆಗಳ ಮಾರ್ಗಸೂಚಿ/ಆದೇಶ/ಸುತ್ತೋಲೆಗಳು ಎಷ್ಟು ; (ಪ್ರತಿ ಒದಗಿಸುವುದು)



(ಈ) ಚಾಲ್ತಿಯಲ್ಲಿರುವ ಎಲ್ಲಾ ಸುತ್ತೋಲೆ, ಆದೇಶ, ಮಾರ್ಗಸೂಚಿಗಳನ್ನು ಒಂದು ವ್ಯವಸ್ಥಿತ ರೀತಿಯಲ್ಲಿ ಪುಸ್ತಕ ರೂಪದಲ್ಲಿ ಬಿಡುಗಡೆ ಮಾಡುವುದು ಸಮಂಜಸವಲ್ಲವೇ ;

(ಉ) ಹೌದಾದಲ್ಲಿ, ಸರ್ಕಾರ ಈ ಬಗ್ಗೆ ಯಾವಾಗ, ಯಾವ ರೀತಿ ಕ್ರಮ ಕೈಗೊಳ್ಳುವುದು ?

## ಕೃಷಿ ಮಾರುಕಟ್ಟೆ ಕೇಂದ್ರ ಮತ್ತು ಗೋದಾಮುಗಳ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೯೦ (೨೮೧) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಎಲ್ಲಾ ತಾಲ್ಲೂಕು ಕೇಂದ್ರಗಳಲ್ಲಿ ಕೃಷಿ ಮಾರುಕಟ್ಟೆ ಕೇಂದ್ರಗಳನ್ನು ತೆರೆಯಲಾಗಿದೆಯೇ ; (ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು)

(ಆ) ಸದರಿ ಕೃಷಿ ಮಾರುಕಟ್ಟೆ ಕೇಂದ್ರಗಳಲ್ಲಿ ದಾಸ್ತಾನು ಕಟ್ಟಡ (ಗೋದಾಮು)ಗಳಿವೆಯೇ ; (ವಿಸ್ತೀರ್ಣದೊಂದಿಗೆ ವಿವರ ನೀಡುವುದು)

(ಇ) ದಾಸ್ತಾನು ಕಟ್ಟಡ (ಗೋಡೌನ್)ಗಳಲ್ಲಿ ಲಭ್ಯವಿರುವ ಸೌಲಭ್ಯಗಳಾವುವು ;

(ಈ) ರೈತರು ದಾಸ್ತಾನು ಕೇಂದ್ರವನ್ನು ಮುಕ್ತವಾಗಿ ಹಾಗೂ ಸರಿಯಾದ ರೀತಿಯಲ್ಲಿ ಉಪಯೋಗಿಸಿಕೊಳ್ಳಲು ಲಭ್ಯವಾಗಿದೆಯೇ ; ಇಲ್ಲವಾದಲ್ಲಿ, ಸರ್ಕಾರ ಈ ಬಗ್ಗೆ ಯಾವ ಕ್ರಮ ಕೈಗೊಳ್ಳಲಿದೆ ?

## ಭತ್ತದ ಕೃಷಿಗೆ ಉತ್ತೇಜನ ನೀಡುವ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೯೧ (೨೮೩) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಪ್ರಮಾಣದಲ್ಲಿ ಭತ್ತದ ಬೆಳೆ ಕೃಷಿ ಮಾಡಲಾಗುತ್ತಿದೆ ; (ಜಿಲ್ಲಾವಾರು, ತಾಲ್ಲೂಕುವಾರು, ವಿಸ್ತೀರ್ಣವಾದ ವಿವರ ನೀಡುವುದು)

(ಆ) ಕಳೆದ ೨ ವರ್ಷದ ಭತ್ತದ ಫಸಲು ಎಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು ವಿವರವನ್ನು ಕ್ವಿಂಟಾಲ್‌ಗಳಲ್ಲಿ ನೀಡುವುದು)

(ಇ) ರಾಜ್ಯದಲ್ಲಿ ಒಟ್ಟು ಎಷ್ಟು ಜಾತಿಯ ಭತ್ತದ ಬೆಳೆಗಳನ್ನು ಬೆಳೆಯಲಾಗುತ್ತಿದೆ ; ಅವುಗಳು ಯಾವುವು ; (ವಿವರ ನೀಡುವುದು)

(ಈ) ಪ್ರಸಕ್ತ ಭತ್ತದ ಬೆಳೆಗೆ ನಿಗದಿಪಡಿಸಲಾಗಿರುವ ಬೆಂಬಲ ಬೆಲೆ ಎಷ್ಟು; (ಕೇಂದ್ರ ಮತ್ತು ರಾಜ್ಯದ ಮೊತ್ತದ ವಿವರ ನೀಡುವುದು)

(ಉ) ಬೆಂಬಲ ಬೆಲೆ ನಿಗದಿಪಡಿಸಿದರೂ, ರೈತರಿಗೆ ಬೆಳೆ ಸಂಗ್ರಹಕ್ಕೆ ಸಕಾಲದಲ್ಲಿ ಗೋದಾಮು ಒದಗಿಸದೇ ರೈತರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಊ) ಉತ್ತಮ ಭತ್ತದ ಬೆಳೆ ಬೆಳೆಯಲು ರೈತರಿಗೆ ಉತ್ತೇಜನ ನೀಡಲು ಹಾಗೂ ಫಸಲು ಸಂಗ್ರಹಕ್ಕೆ ಗೋದಾಮು ಒದಗಿಸಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ?



## ಸಿಬ್ಬಂದಿಗಳ ಕೊರತೆ ಬಗ್ಗೆ

**ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೧೯೨ (೨೮೭) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ವಿಭಾಗದ ಜೇಸ್ಕಂ ವಿದ್ಯುತ್ ಸರಬರಾಜು ಕಂಪನಿಯಲ್ಲಿ ಮಂಜೂರಾಗಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ; ಹಾಲಿ ಕಾರ್ಯ ನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು ; ಖಾಲಿ ಹುದ್ದೆಗಳ ಸಂಖ್ಯೆ ಎಷ್ಟು ; (ಹುದ್ದೆವಾರು ವಿವರ ನೀಡುವುದು)

(ಆ) ಸಾಕಷ್ಟು ಸಂಖ್ಯೆಯಲ್ಲಿ ಪ್ರಮುಖವಾದ ಹುದ್ದೆಗಳು ಖಾಲಿಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬಂದಿದ್ದಲ್ಲಿ, ಖಾಲಿ ಹುದ್ದೆಗಳನ್ನು ತುಂಬಲು ಸರ್ಕಾರ ಏನು ಕ್ರಮ ತೆಗೆದುಕೊಂಡಿದೆ, ಹಾಗೂ ಎಷ್ಟು ತಿಂಗಳುಗಳಲ್ಲಿ ಹುದ್ದೆಗಳನ್ನು ಭರ್ತಿ ಮಾಡಲಾಗುವುದು ?

## ಪೌರಾಡಳಿತ ಇಲಾಖೆಯಲ್ಲಿ ಖಾಲಿ ಹುದ್ದೆಗಳು

**ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೧೯೩ (೨೮೬) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪೌರಾಡಳಿತ ಇಲಾಖೆಗೆ ಮಂಜೂರಾಗಿರುವ ಹುದ್ದೆಗಳ ಸಂಖ್ಯೆ ಎಷ್ಟು; ಈ ಪೈಕಿ ಎಷ್ಟು ಹುದ್ದೆಗಳು ಭರ್ತಿಯಾಗಿವೆ ಮತ್ತು

ಎಷ್ಟು ಹುದ್ದೆಗಳು ಖಾಲಿ ಇವೆ; (ಹುದ್ದೆವಾರು ವಿಧಾನಸಭಾ ಕ್ಷೇತ್ರವಾರು ಅಂಕಿ ಅಂಶಗಳ ವಿವರ ಒದಗಿಸುವುದು)

ಆ) ಪೌರಾಡಳಿತ ಇಲಾಖೆಯಿಂದ ವಿವಿಧ ಇಲಾಖೆಗಳಲ್ಲಿ ನಿಯೋಜನೆ ಮತ್ತು ಅನ್ಯ ಕರ್ತವ್ಯದ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿಗಳು ಮತ್ತು ಸಿಬ್ಬಂದಿಗಳ ಸಂಖ್ಯೆ ಎಷ್ಟು; (ಹೆಸರು, ಪದನಾಮ, ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವ ಹಾಗೂ ಅವಧಿಯ ಮಾಹಿತಿಯನ್ನು ಒದಗಿಸುವುದು ;

ಇ) ಇಲಾಖೆಯಲ್ಲಿ ಅಧಿಕಾರಿಗಳು ಮತ್ತು ಸಿಬ್ಬಂದಿಯ ಕೊರತೆಯನ್ನು ಪರಿಗಣಿಸಿ ಮತ್ತು ಆಡಳಿತ ಹಿತದೃಷ್ಠಿಯಿಂದ ಮತ್ತು ದೀರ್ಘ ಕಾಲದಿಂದ ಅನ್ಯ ಇಲಾಖೆಗಳಲ್ಲಿ ನಿಯೋಜನೆ ಓ.ಓ.ಡಿ. ಮತ್ತು ಇತರೆ ವ್ಯವಸ್ಥೆಗಳೊಂದಿಗೆ ಕೆಲಸ ಮಾಡುತ್ತಿರುವ ಎಲ್ಲಾ ಅಧಿಕಾರಿಗಳನ್ನು ಕೂಡಲೇ ಹಿಂದಕ್ಕೆ ಕರೆಸಿಕೊಳ್ಳುವ ಬಗ್ಗೆ ಸರ್ಕಾರ ಕ್ರಮ ಕೈಗೊಳ್ಳುವುದೇ ?

## ತೋಟಗಾರಿಕೆ ಬೆಳೆಗಳಿಗೆ ಹನಿ ನೀರಾವರಿ ಒದಗಿಸುವ ಬಗ್ಗೆ

**ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೧೯೪ (೨೮೮) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೩–೧೪ ಮತ್ತು ೨೦೧೪–೧೫ನೇ ಸಾಲಿನ ಆಯವ್ಯಯದಲ್ಲಿ ಸರ್ಕಾರವು ತೋಟಗಾರಿಕೆ ಬೆಳೆಗಳ ಹನಿ ನೀರಾವರಿ ಯೋಜನೆಗೆ



ನಿಗದಿಪಡಿಸಿದ ಅನುದಾನವೆಷ್ಟು; ಮಂಜೂರಾದ ಅನುದಾನವೆಷ್ಟು; ಬಿಡುಗಡೆ ಮಾಡಿದ ಹಣವೆಷ್ಟು;

(ಆ) ಸರ್ಕಾರಕ್ಕೆ ಕಳೆದ ೩ ವರ್ಷಗಳಲ್ಲಿ ಹನಿ ನೀರಾವರಿ ಯೋಜನೆಗಾಗಿ ಅರ್ಜಿ ಸಲ್ಲಿಸಿದ ಫಲಾನುಭವಿಗಳ ಸಂಖ್ಯೆ ಎಷ್ಟು; ಅನುಷ್ಠಾನಗೊಳಿಸಿದ ಅನುದಾನ ಬಿಡುಗಡೆ ಮಾಡಿದ ಸಂಖ್ಯೆ ಎಷ್ಟು;

(ಇ) ಸದರಿ ಯೋಜನೆ ಅಡಿಯಲ್ಲಿ ಬೀದರ್ ಜಿಲ್ಲೆಗೆ ಹನಿ ನೀರಾವರಿ ಯೋಜನೆಗಾಗಿ ನಿಗದಿಪಡಿಸಿದ ಅನುದಾನವೆಷ್ಟು; ವೆಚ್ಚ ಮಾಡಿದ ಹಣವೆಷ್ಟು ? (ಫಲಾನುಭವಿಗಳ ಗ್ರಾಮಗಳ ತಾಲ್ಲೂಕುವಾರು ಮಾಹಿತಿ ಒದಗಿಸುವುದು)

## ಸಕ್ಕರೆ ಉತ್ಪಾದನೆ ಆಗುತ್ತಿರುವ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೧೯೫ (೨೮೨) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸಹಕಾರಿ ಸಕ್ಕರೆ ಕಾರ್ಖಾನೆಗಳು ಮತ್ತು ಖಾಸಗಿ ಸಕ್ಕರೆ ಕಾರ್ಖಾನೆಗಳು ಪ್ರತ್ಯೇಕವಾಗಿ ಉತ್ಪಾದಿಸುತ್ತಿರುವ ಸಕ್ಕರೆಯ ಪ್ರಮಾಣ ಎಷ್ಟು ; (ಪ್ರತಿಯೊಂದು ಕಾರ್ಖಾನೆವಾರು ವಿವರ ನೀಡುವುದು)

(ಆ) ರಾಜ್ಯದಲ್ಲಿ ಒಂದು ವರ್ಷಕ್ಕೆ ಬೇಕಾಗುವ ಒಟ್ಟು ಸಕ್ಕರೆ ಪ್ರಮಾಣ ಎಷ್ಟು ; ಹೆಚ್ಚಿನ ಸಕ್ಕರೆಯನ್ನು ಯಾವ ಯಾವ ರಾಜ್ಯಗಳಿಗೆ ಕಳುಹಿಸಲಾಗುತ್ತದೆ ; ಕಡಿಮೆ ಆದಾಗ ಎಲ್ಲಿಂದ ತರಿಸಲಾಗುವುದು;

(ಇ) ಯಾವ ಯಾವ ಸಹಕಾರಿ ಸಕ್ಕರೆ ಕಾರ್ಖಾನೆಗಳು ವಿದ್ಯುತ್ ಉತ್ಪಾದನೆ ಮತ್ತು ಡಿಸ್ಟಿಲರಿ ಘಟಕಗಳನ್ನು ಹೊಂದಿವೆ ;

(ಈ) ಯಾವ ಯಾವ ಸಹಕಾರಿ ಸಕ್ಕರೆ ಕಾರ್ಖಾನೆಗಳು ಲಾಭದಾಯಕವಾಗಿ ನಡೆಯುತ್ತಿವೆ ; (ವಿವರಣೆ ನೀಡುವುದು)

(ಉ) ನಷ್ಟದಿಂದಾಗಿ ಮುಚ್ಚಿರುವ ಸಕ್ಕರೆ ಕಾರ್ಖಾನೆಗಳು ಯಾವುವು ?

## ತುರುವೇಕೆರೆ ಕ್ಷೇತ್ರದ ಎಸ್.ಸಿ.ಪಿ. ಹಾಗೂ ಯೋಜನೆ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೧೯೬ (೨೯೧) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತುರುವೇಕೆರೆ ಕ್ಷೇತ್ರಕ್ಕೆ ೨೦೧೩–೧೪ನೇ ಸಾಲಿನ ಎಸ್‌ಸಿಪಿ ಹಾಗೂ ಟಿಎಸ್‌ಪಿ ಯೋಜನೆಯಲ್ಲಿ ಮಂಜೂರಾದ ಹಣ ಎಷ್ಟು ; ವಿವರ ನೀಡುವುದು ;

(ಆ) ಹಂಚಿಕೆಯಾದ ಹಣದಲ್ಲಿ ತೆಗೆದುಕೊಂಡಿರುವ ಕಾಮಗಾರಿಗಳು ಯಾವುವು ; (ಕಾಮಗಾರಿವಾರು ವಿವರ ನೀಡುವುದು)

(ಇ) ಕಾಮಗಾರಿಗಳನ್ನು ಯಾವ ಮಾನದಂಡದ ಮೇಲೆ ಆಯ್ಕೆ ಮಾಡಲಾಗಿತ್ತು ;

(ಈ) ಈಗಾಗಲೇ ಮುಕ್ತಾಯಗೊಂಡಿರುವ ಕಾಮಗಾರಿಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಉ) ಕಾಮಗಾರಿಗಳ ಗುಣಮಟ್ಟವನ್ನು ಪರೀಕ್ಷಿಸಲಾಗಿದೆಯೆ ; ಯಾವಾಗ ಪರೀಕ್ಷಿಸಲಾಯಿತು ; (ದಿನಾಂಕವಾರು ವರದಿಯ ವಿವರ ನೀಡುವುದು)



(ಊ) ಕಳಪೆ ಕಾಮಗಾರಿ ಆಗಿರುವ ಬಗ್ಗೆ ತೆಗೆದುಕೊಂಡಿರುವ ಕ್ರಮಗಳೇನು ?

## ಸಹಕಾರ ಸಂಘಗಳ ಭೂ ಹಗರಣ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೧೯೭ (೨೯೩) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗೃಹ ನಿರ್ಮಾಣ ಸಹಕಾರ ಸಂಘಗಳ ಮೂಲಕ ಭೂ ಹಗರಣ ಅವ್ಯವಹಾರ ನಡೆದಿರುವ ಪ್ರಕರಣಗಳು ಬೆಳಕಿಗೆ ಬಂದಿವೆಯೇ; ಅವು ಎಲ್ಲೆಲ್ಲಿ ಜರುಗಿವೆ; (ಬೆಂಗಳೂರು ನಗರದಲ್ಲಿ ನಡೆದಿರುವ ಹೌಸಿಂಗ್ ಸೊಸೈಟಿಗಳವಾರು ವಿವರ ಒದಗಿಸುವುದು)

(ಆ) ಇದರಲ್ಲಿ ಭಾಗಿಯಾಗಿರುವವರು ಯಾರ್‍ಯಾರು; ಇವುಗಳ ಅಕ್ರಮ–ಅವ್ಯವಹಾರಗಳೇನು; ಈ ಆರೋಪಗಳು ತನಿಖೆಯಿಂದ ಸಾಬೀತಾಗಿವೆಯೇ;

(ಇ) ಸಾಬೀತಾಗಿದ್ದಲ್ಲಿ ಅಂತಹವರ ವಿರುದ್ಧ ಕ್ರಮ ಕೈಗೊಳ್ಳಲು ಸರ್ಕಾರವೇಕೆ ಹಿಂದೇಟು ಹಾಕುತ್ತಿದೆ; ಎಷ್ಟು ವರ್ಷಗಳಿಂದ ಅವರ ಮೇಲೆ ಕ್ರಮಕೈಗೊಳ್ಳದೆ ವಿಳಂಬ ಮಾಡಲಾಗಿದೆ ;

(ಈ) ಈ ರೀತಿಯ ಅಕ್ರಮ ಪ್ರಕರಣ ಹಗರಣದಲ್ಲಿ ಬೆಂಗಳೂರು ನಗರದ ಎಷ್ಟು ಗೃಹ ನಿರ್ಮಾಣ ಸಹಕಾರ ಸಂಘಗಳು ಭಾಗಿಯಾಗಿವೆ ;

(ಉ) ಅದೇ ರೀತಿ ಎನ್.ಟಿ.ಐ. (NTI) ಸೊಸೈಟಿಯಲ್ಲಿ ಆಗಿರುವ ಅವ್ಯವಹಾರಗಳು ಯಾವುವು; ಇದರ ತನಿಖೆ ಯಾವ ಹಂತದಲ್ಲಿದೆ ; ತಪ್ಪಿತಸ್ಥರ ವಿರುದ್ಧ ಯಾವ ಕ್ರಮವನ್ನು ಕೈಗೊಳ್ಳಲಾಗಿದೆ ? (ಪೂರ್ಣ ವಿವರ ನೀಡುವುದು)

## ರಾಜ್ಯದ ಬಡ ನೇಕಾರರಿಗೂ ಉಚಿತ ವಿದ್ಯುತ್ ನೀಡುವ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೧೯೮ (೨೮೯) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ರೈತರ ಪಂಪಸೆಟ್‌ಗಳಿಗೆ ಉಚಿತ ವಿದ್ಯುತ್‌ಚ್ಛಕ್ತಿ ನೀಡುತ್ತಿರುವುದು ನಿಜವೇ;

(ಆ) ಎಷ್ಟು ವರ್ಷಗಳಿಂದ ಈ ಯೋಜನೆ ಜಾರಿಗೆ ಬಂದಿದೆ;

(ಇ) ರಾಜ್ಯದ ಬಡ ಕೂಲಿ ಕಾರ್ಮಿಕ ನೇಕಾರ ಕುಟುಂಬಗಳಿಗೆ ಸಬ್ಸಿಡಿ ದರದಲ್ಲಿ ವಿದ್ಯುತ್ ನೀಡುತ್ತಿರುವ ಯೋಜನೆ ಯಾವಾಗ ಜಾರಿಗೆ ಬಂದಿದೆ;



(ಈ) ರೈತ ಮತ್ತು ನೇಕಾರ ಒಂದೇ ಮುಖದ ಎರಡು ಕಣ್ಣುಗಳು ಎಂದು ಹೇಳುವ ಸರ್ಕಾರ ಬಡ ಕೂಲಿ ಕಾರ್ಮಿಕ ನೇಕಾರರಿಗೆ ರೈತರಿಗೆ ನೀಡುವಂತೆ ನೇಕಾರರಿಗೂ ಉಚಿತ ವಿದ್ಯುತ್ ನೀಡುವಂತೆ ಜಾರಿಗೆ ತರಲಾಗುವುದೇ;

(ಉ) ಯಾವಾಗ ಈ ಉಚಿತ ವಿದ್ಯುತ್ ನೀಡಲು ಆದೇಶ ಮಾಡಲಾಗುವುದು ?

## ಬೆಳಗಾವಿ ವಿಭಾಗದ ಕೃಷಿ ಹೊಂಡಗಳ ಆಯ್ಕೆ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೧೯೯ (೨೯೦) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೃಷಿ ಇಲಾಖೆಯ "ಸುವರ್ಣ ಕೃಷಿ ಹೊಂಡ" ಯೋಜನೆ ಪ್ರಾರಂಭವಾದಾಗಿನಿಂದ ಇದುವರೆಗೆ ಬೆಳಗಾವಿ ವಿಭಾಗದ ಜಿಲ್ಲೆಗಳಲ್ಲಿ ಆಯ್ಕೆಯಾಗಿರುವ ಫಲಾನುಭವಿಗಳ ಸಂಖ್ಯೆ ಎಷ್ಟು ನಿಗದಿಪಡಿಸಿದ ಮೊತ್ತ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಫಲಾನುಭವಿಗಳನ್ನು ಆಯ್ಕೆ ಮಾಡಲು ಸರ್ಕಾರ ಯಾವ ಮಾನದಂಡಗಳನ್ನು ಅನುಸರಿಸಿದೆ ;

(ಇ) ಪ್ರತ್ಯೇಕ ಸಮಿತಿಗಳನ್ನು ರಚಿಸಲಾಗಿದೆಯೇ ?

## ರಾಯಚೂರು ಮತ್ತು ಕೊಪ್ಪಳ ಜಿಲ್ಲೆಯಲ್ಲಿ ಸುರಿದ ಭಾರಿ ಗಾತ್ರದ ಆಣೆಕಲ್ಲು ಬೆಳೆಹಾನಿ ಬಗ್ಗೆ

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೦೦ (೨೯೮) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು – ಕೊಪ್ಪಳ ಜಿಲ್ಲೆಯಲ್ಲಿ ಸುರಿದ ಭಾರಿ ಗಾತ್ರದ ಆಣೆಕಲ್ಲಿನ ಮಳೆಯಿಂದಾಗಿ ಹಾನಿಗೀಡಾದ ಭತ್ತದ ಒಟ್ಟು ಪ್ರದೇಶ ಎಷ್ಟು;

(ಆ) ಇದರಲ್ಲಿ ಪರಿಹಾರಕ್ಕೆ ಯೋಗ್ಯವಾದದನ್ನು ಗುರುತಿಸಿದ ಒಟ್ಟು ಕ್ಷೇತ್ರ ಎಷ್ಟು;

(ಇ) ಇಲಾಖೆಯವರು ಕೋರಿದ ಅನುದಾನದ ಮೊತ್ತ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಈ) ಸರಕಾರ ಮಂಜೂರು ಮಾಡಿದ ಅನುದಾನದ ಮೊತ್ತ ಎಷ್ಟು;

(ಉ) ಸದ್ಯ ಪರಿಹಾರವನ್ನು ವಿತರಿಸಲಾಗಿದೆಯೇ; (ತಾಲ್ಲೂಕುವಾರು ವಿವರಗಳನ್ನು ನೀಡುವುದು)

(ಊ) ವಿತರಣೆ ಕಾರ್ಯ ಬಾಕಿ ಇದ್ದಲ್ಲಿ, ಎಷ್ಟು ಪರಿಹಾರ ವಿತರಣೆ ಬಾಕಿ ಉಳಿದಿದೆ ? (ವಿವರಗಳನ್ನು ನೀಡುವುದು)



## ಭಾನಾಪೂರ–ಯಲಬುರ್ಗಾ ರಸ್ತೆ ನಿರ್ಮಾಣ ಕಾಮಗಾರಿ ಬಗ್ಗೆ

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೦೧ (೨೯೪) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಪ್ಪಳ ಜಿಲ್ಲೆಯ ಯಲಬುರ್ಗಾ ತಾಲ್ಲೂಕಿನಲ್ಲಿ ಭಾನಾಪೂರ–ಯಲಬುರ್ಗಾ ರಸ್ತೆ ನಿರ್ವಾಣ ಕಾಮಗಾರಿಗೆ ಸರ್ಕಾರ ಮಂಜೂರು ಮಾಡಿರುವ ಅನುದಾನ ಎಷ್ಟು; ಆ ಪೈಕಿ ಬಿಡುಗಡೆ ಮಾಡಲಾದ ಅನುದಾನ ಎಷ್ಟು;

(ಆ) ಸದರಿ ಕಾಮಗಾರಿಯನ್ನು ಯಾವ ಸಂಸ್ಥೆ ನಿರ್ಮಿಸುತ್ತಿದೆ; ಅದರ ಕಾಲಮಿತಿ ಏನು;

(ಇ) ಕಾಮಗಾರಿಯ ಪ್ರಗತಿ ಯಾವ ಹಂತದಲ್ಲಿದೆ;

(ಈ) ಕರಾರಿನನ್ವಯ ಕಾಮಗಾರಿಯ ಗುಣಮಟ್ಟ ಪರೀಕ್ಷೆಗೆ ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರಗಳನ್ನು ನೀಡುವುದು)

## ಸಿ.ಎಮ್.ಎಸ್ ಮತ್ತು ಎಮ್.ಟಿ.ಡಿ.ಪಿ ಯೋಜನೆ

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೦೨ (೨೯೫) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಪ್ಪಳ ಜಿಲ್ಲೆಯಲ್ಲಿ ಸಿ.ಎಮ್.ಎಸ್ ಮತ್ತು ಎಮ್.ಟಿ.ಡಿ.ಪಿ ಯೋಜನೆಯಲ್ಲಿ ೨೦೧೨–೧೩ ರಿಂದ ಪ್ರಸಕ್ತ ಸಾಲಿನವರೆಗೆ

ಎಷ್ಟು ಅನುದಾನ ಸ್ವೀಕೃತವಾಗಿದೆ; (ತಾಲ್ಲೂಕುವಾರು ವಿವರಗಳನ್ನು ನೀಡುವುದು)

(ಆ) ಸದರಿ ಯೋಜನೆ ಅಡಿಯಲ್ಲಿ ಕೈಗೊಂಡಿರುವ ಕಾಮಗಾರಿಗಳು ಯಾವುವು; (ವಿವರ ನೀಡುವುದು)

(ಇ) ಸದರಿ ಯೋಜನೆಯಲ್ಲಿ ಯಾವ ತರಹದ ಕಾಮಗಾರಿಗಳನ್ನು ಅಳವಡಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ;

(ಈ) ಸದರಿ ಕಾಮಗಾರಿಗಳ ಪ್ರಗತಿ ಯಾವ ಹಂತದಲ್ಲಿದೆ; (ಕಾಮಗಾರಿವಾರು ವಿವರ ನೀಡುವುದು)

(ಉ) ಕಾಮಗಾರಿಗಳ ವಿಳಂಬಕ್ಕೆ ಕಾರಣಗಳೇನು ?

## "ಎಲ್‌ಇಡಿ" ಬಲ್ಬುಗಳನ್ನು ರಿಯಾಯಿತಿ ದರದಲ್ಲಿ ವಿತರಿಸುವ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೦೩ (೨೯೬) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ "ಎಲ್‌ಇಡಿ" ಬಲ್ಬುಗಳನ್ನು ಗ್ರಾಹಕರಿಗೆ ರಿಯಾಯಿತಿ ದರದಲ್ಲಿ ವಿತರಿಸುವ ಯೋಜನೆ ಸರ್ಕಾರದ ಮುಂದಿದೆಯೇ ;

(ಆ) ಹಾಗಿದ್ದಲ್ಲಿ "ಎಲ್‌ಇಡಿ" ಬಲ್ಬುಗಳನ್ನು ವಿತರಿಸಿದಲ್ಲಿ ರಾಜ್ಯದ ಬೊಕ್ಕಸಕ್ಕೆ ತಗಲುವ ವೆಚ್ಚವೆಷ್ಟು ಹಾಗೂ ಉಳಿತಾಯವಾಗುವ ವಿದ್ಯುತ್ತಿನ ಪ್ರಮಾಣವೆಷ್ಟು ? (ಸಮಗ್ರ ಮಾಹಿತಿ ನೀಡುವುದು)



## ಅಕ್ರಮ ಮರಳು ಸಾಗಾಣಿಕೆ

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು):–**

೨೦೪ (೩೦೦) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೩–೧೪ ಮತ್ತು ೨೦೧೪–೨೦೧೫ನೇ ಸಾಲಿನಲ್ಲಿ ರಾಜ್ಯಾದ್ಯಾಂತ ಮರಳು ಮಾರಾಟದಿಂದ ಸರ್ಕಾರಕ್ಕೆ ಬಂದಿರುವ ರಾಯಲ್ಟಿ ಹಣ ಎಷ್ಟು;

(ಆ) ಅಕ್ರಮ ಮರಳು ಸಾಗಾಣಿಕೆ ದಂಧೆಯಲ್ಲಿ ಸಿಕ್ಕಿ ಬಿದ್ದಿರುವವರಾರು ಮತ್ತು ಅದರಿಂದ ಸರ್ಕಾರಕ್ಕೆ ಬಂದಿರುವ ಹಣವೆಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಇ) ರಾಜ್ಯದ ರಾಜಧಾನಿ ಬೆಂಗಳೂರು ಮಹಾನಗರದಲ್ಲಿ ಮರಳು ಸರಬರಾಜಿಗೆ ತೊಂದರೆಯಾಗುತ್ತಿರುವುದು ನಿಜವೆ; ಹಾಗಿದ್ದಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ಯಶವಂತಪುರ ಕೃಷಿ ಮಾರುಕಟ್ಟೆ ಪ್ರಾಂಗಣವು ಮೂಲಭೂತ ಸೌಕರ್ಯದ ಬಗ್ಗೆ

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು):–**

೨೦೫ (೨೯೯) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಯಶವಂತಪುರ ಕೃಷಿ ಮಾರುಕಟ್ಟೆ ಪ್ರಾಂಗಣವು ಮೂಲಭೂತ ಸೌಕರ್ಯವಿಲ್ಲದೇ ಸಮಸ್ಯೆಗಳ ಅಗರವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಅಗ್ನಿ ಅವಗಢ ಸಂಭವಿಸಿದರೆ ಫೈರ್ ವ್ಯಾನ್, ಆಂಬುಲೆನ್ಸ್ ವಾಹನ, ಪೊಲೀಸ್ ವಾಹನ ತುರ್ತಾಗಿ ಒಳಗೆ ಪ್ರವೇಶಿಸಲು ಸಾಧ್ಯವಾಗದ ಪರಿಸ್ಥಿತಿ ನಿವಾರಣೆ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳುವುದು;

(ಇ) ಕುಡಿಯುವ ನೀರು, ಹದಗೆಟ್ಟ ರಸ್ತೆ, ಎಲ್ಲೆಂದರಲ್ಲಿ ವಾಹನ ನಿಲುಗಡೆಗೆ ಸೌಲಭ್ಯವಿಲ್ಲದಿರುವುದು ಅಲ್ಲದೆ, ಕೆಲವು ಮಾಫಿಯಗಳ ಹಾವಳಿ ಇದ್ದು ಇದರ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮವೇನು?

## ಗ್ರಾಮೀಣ ಪ್ರದೇಶಗಳಿಗೆ ಹೆಚ್ಚಿನ ಸಮಯ ವಿದ್ಯುತ್ ಪೂರೈಸುವ ಬಗ್ಗೆ

**ಶ್ರೀ ಮಹಾಂತೇಶ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೨೦೬ (೩೦೪) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ನಗರ ಪ್ರದೇಶಗಳಲ್ಲಿ ಮತ್ತು ಗ್ರಾಮೀಣ ಪ್ರದೇಶಗಳಿಗೆ ದಿನಕ್ಕೆ ಎಷ್ಟು ಗಂಟೆಗಳ ಕಾಲ ವಿದ್ಯುತ್ ಪೂರೈಸಲಾಗುತ್ತಿದೆ;

(ಆ) ಗ್ರಾಮೀಣ ಪ್ರದೇಶಗಳಲ್ಲಿ ನಿಯಮಿತವಾಗಿ ವಿದ್ಯುತ್ ಸರಬರಾಜು ಮಾಡುತ್ತಿಲ್ಲದಿರುವುದರಿಂದ ತೊಂದರೆಯುಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಮುಖ್ಯವಾಗಿ ಗ್ರಾಮೀಣ ಪ್ರದೇಶದಲ್ಲಿರುವ ವಿದ್ಯಾರ್ಥಿಗಳಿಗೆ ವಿದ್ಯುತ್‌ನ ಕೊರತೆಯಿಂದಾಗಿ ರಾತ್ರಿ ವೇಳೆ ಅಭ್ಯಾಸ ಮಾಡಲು ತುಂಬಾ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;



(ಈ) ಈ ಎಲ್ಲಾ ಸಮಸ್ಯೆಗಳನ್ನು ಪರಿಹರಿಸುವ ನಿಟ್ಟಿನಲ್ಲಿ, ಗ್ರಾಮೀಣ ಪ್ರದೇಶಗಳಿಗೆ ಹೆಚ್ಚಿನ ಸಮಯ ಪ್ರಮುಖವಾಗಿ ರಾತ್ರಿ ಹೊತ್ತಿನಲ್ಲಿ ವಿದ್ಯುತ್ ಪೂರೈಕೆ ಮಾಡಲು ಸರ್ಕಾರವು ಕ್ರಮ ಕೈಗೊಳ್ಳುವುದೇ ?

## ಹನಿ ನೀರಾವರಿ ಯೋಜನೆಗೆ ಹಣ ಬಿಡುಗಡೆ ಮಾಡುವ ಕುರಿತು

**ಶ್ರೀ ಮಹಾಂತೇಶ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೨೦೭ (೩೦೩) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆಗೆ ಹನಿ ನೀರಾವರಿ ಯೋಜನೆಗಾಗಿ ಕಳೆದ ಮೂರು ವರ್ಷದಿಂದ ಮಂಜೂರಾದ ಹಣವೆಷ್ಟು; ಇದರಲ್ಲಿ ಬಿಡುಗಡೆಯಾದ ಮೊತ್ತವೆಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಹಣ ಸಂಪೂರ್ಣವಾಗಿ ಬಿಡುಗಡೆಯಾಗದೇ ಇರುವುದರಿಂದ ರೈತರಿಗೆ ತೊಂದರೆಯುಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬಂದಿದ್ದಲ್ಲಿ, ಕೂಡಲೇ ಉಳಿದ ಹಣವನ್ನು ಬಿಡುಗಡೆ ಮಾಡಲಾಗುವುದೇ ?

## ರೈತರ ಪಂಪ್‌ಸೆಟ್‌ಗಳಿಗೆ ಹೆಚ್ಚಿನ ಸಮಯ ವಿದ್ಯುತ್ ಪೂರೈಸುವ ಕುರಿತು

**ಶ್ರೀ ಮಹಾಂತೇಶ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ) :–**

೨೦೮ (೩೦೨) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರವು ರೈತರ ಎಷ್ಟು ಹೆಚ್.ಪಿ ಸಾಮರ್ಥ್ಯದ ಪಂಪ್‌ಸೆಟ್‌ಗಳಿಗೆ ಉಚಿತ ವಿದ್ಯುತ್ ಪೂರೈಕೆ ಮಾಡಲಾಗುತ್ತಿದೆ;

(ಆ) ಪ್ರಸ್ತುತ ರೈತರ ಪಂಪ್‌ಸೆಟ್‌ಗಳಿಗೆ ದಿನಕ್ಕೆ ಎಷ್ಟು ಗಂಟೆಗಳ ಕಾಲ ವಿದ್ಯುತ್ ಪೂರೈಸಲಾಗುತ್ತಿದೆ ಮತ್ತು ಎಷ್ಟು ಫೇಸ್ ವಿದ್ಯುತ್ ಪೂರೈಸಲಾಗುತ್ತಿದೆ;

(ಇ) ರೈತರ ಪಂಪ್‌ಸೆಟ್‌ಗಳಿಗೆ ಈಗ ಪೂರೈಸಲಾಗುತ್ತಿರುವ ಸಮಯಕ್ಕಿಂತ ಇನ್ನೂ ಹೆಚ್ಚು ಸಮಯ ವಿದ್ಯುತ್ ಪೂರೈಕೆ ಮಾಡಿದ್ದಲ್ಲಿ ರೈತರಿಗೆ ತುಂಬಾ ಅನುಕೂಲವಾಗುವುದರಿಂದ ಸರ್ಕಾರವು ಈ ಬಗ್ಗೆ ಕೂಡಲೇ ಕ್ರಮ ಕೈಗೊಳ್ಳಲಾಗುವುದೇ ?



## ಹೆಗ್ಗಡದೇವನಕೋಟೆ ತಾಲ್ಲೂಕು ಸಾಗರೆ ಗ್ರಾಮದ ಸೇತುವೆಯ ದುರಸ್ತಿ ಕುರಿತು

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೦೯ (೧೮೨) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೆಗ್ಗಡದೇವನಕೋಟೆ ತಾಲ್ಲೂಕು ಸಾಗರೆ ಗ್ರಾಮದ ಕಬಿನಿ ಸೇತುವೆಯ ಮೇಲಿನ ರಸ್ತೆ ಸಂಪೂರ್ಣವಾಗಿ ಹದಗೆಟ್ಟಿದ್ದು ವಾಹನಗಳ ಸಂಚಾರಕ್ಕೆ ತೀವ್ರ ತೊಂದರೆಯಾಗಿರುವುದರಿಂದ ಇದನ್ನು ರಿಪೇರಿ ಮಾಡಲು ಕ್ರಮ ಜರುಗಿಸಲಾಗುವುದೇ ;

(ಆ) ಸಾಗರೆ ಗ್ರಾಮದಿಂದ ಮೈಸೂರು–ಮಾನಂದವಾಡಿ ರಾಜ್ಯ ಹೆದ್ದಾರಿಯವರೆಗಿನ ರಸ್ತೆಯು ದುಸ್ಥಿತಿಯಲ್ಲಿದ್ದು ಇದನ್ನು ದುರಸ್ಥಿ ಮಾಡಲು ಕ್ರಮ ಜರುಗಿಸಲಾಗುವುದೇ ?

## ಚಾಮರಾಜನಗರ ಜಿಲ್ಲೆಯಲ್ಲಿ ಎಳೆನೀರು ಮಾರುಕಟ್ಟೆಗಳ ಸ್ಥಾಪನೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೧೦ (೧೮೧) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಾಮರಾಜನಗರ ಜಿಲ್ಲೆಯಲ್ಲಿ ಎಳೆನೀರು (ಟೆಂಡರ್ ಕೋಕೋನಟ್) ಮಾರುಕಟ್ಟೆಗಳು ಎಲ್ಲೆಲ್ಲಿ ಕಾರ್ಯಾಚರಣೆ

ಮಾಡುತ್ತಿವೆ ; ಈ ಮಾರುಕಟ್ಟೆಗಳಿಗೆ ವಾರ್ಷಿಕ ೨೦೧೨–೧೩, ೨೦೧೩–೧೪ ಮತ್ತು ೨೦೧೪–೧೫ನೇ ಸಾಲಿನಲ್ಲಿ ಬಂದಿರುವ ಎಳೆನೀರುಗಳ ಸಂಖ್ಯೆ ಎಷ್ಟು ; ಈ ಸಾಲುಗಳ ವಾರ್ಷಿಕ ವಹಿವಾಟುವಿನ ಪ್ರಮಾಣ ಎಷ್ಟು ; (ವಿವರ ಒದಗಿಸುವುದು)

(ಆ) ಚಾಮರಾಜನಗರ, ತೆರಕಣಾಂಬಿ, ಗುಂಡ್ಲುಪೇಟೆಗಳಲ್ಲಿ ಸುಸಜ್ಜಿತವಾದ ಪ್ರತ್ಯೇಕ ಎಳೆನೀರು ಮಾರುಕಟ್ಟೆಗಳನ್ನು ಸ್ಥಾಪಿಸಲು ಕ್ರಮ ಜರುಗಿಸಲಾಗುವುದೇ ;

(ಇ) ರಾಜ್ಯದಲ್ಲಿ ತೆಂಗಿನ ಉತ್ಪನ್ನಗಳ ಮೌಲ್ಯವರ್ಧನೆಗೆ ತೆಂಗಿನ ಪಾರ್ಕ್‌ಗಳನ್ನು ಸ್ಥಾಪಿಸುವ ಪ್ರಸ್ತಾವನೆ ಯಾವ ಹಂತದಲ್ಲಿದೆ; ಚಾಮರಾಜನಗರದಲ್ಲಿ ತೆಂಗಿನ ಪಾರ್ಕ್ ಸ್ಥಾಪಿಸಲು ಕ್ರಮ ತೆಗೆದುಕೊಳ್ಳಲಾಗಿದೆಯೇ ?

**ವಿ. ಶ್ರೀಶ್**

ಕಾರ್ಯದರ್ಶಿ

ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಘಟಕ–2, ಬೆಂ–59/ಕಾ.ಸೂ.O3564/800 ಪ್ರತಿಗಳು/27–06–2014